ಸಂಪಾದಕರು: ರವಿಕುಮಾರ್ ಸಿ.ಹೆಚ್.
RNI: KARKAN/2021/80805
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYA PRAGATHI Kannada daily
SP NEWS ಡಿಜಿಟಲ್ ನ್ಯೂಸ್ ಕಹಾನಿ
ಪ್ರತಿ ಸುದ್ದಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 Issue:122
ಸಂಪುಟ: 05 ಸಂಚಿಕೆ: 122
Date:28-05-2026 Thursday
RNI NO : KARKAN/2021/80805 L2/RNP-1285/TMR/2025-27
Page :4 ಪುಟ : 4
Price: 1.00 ಬೆಲೆ: 1.00 ರೂ

# ರಾಜೀನಾಮೆಗೂ ಮುನ್ನ ಜಾತಿ ಗಣತಿ ವರದಿ ಸ್ವೀಕರಿಸಿದ ಸಿದ್ದರಾಮಯ್ಯ, ಮುಸ್ಲಿಂ ನಂ.1 ಜಾತಿ!

ಸೂರ್ಯಪ್ರಗತಿನ್ಯೂಸ್.ಕಾಂ

ಕರ್ನಾಟಕ ಕಾಂಗ್ರೆಸ್‌ನಲ್ಲಿನ ನಾಯಕತ್ವ ಬದಲಾವಣೆ ರಾಜಕೀಯ ಪ್ರಹಸನ ಅಂತಿಮ ಘಟ್ಟ ತಲುಪಿದ್ದು, ಇಂದು ಮುಖ್ಯಮಂತ್ರಿ ಸ್ಥಾನಕ್ಕೆ ಸಿದ್ದರಾಮಯ್ಯನವರು ರಾಜೀನಾಮೆ ನೀಡಲಿದ್ದಾರೆ. ಈ ಸಂಬಂಧ ಲೋಕಭವನಕ್ಕೂ ಮಾಹಿತಿ ನೀಡಿದ್ದಾರೆ. ಆದ್ರೆ, ಪದತ್ಯಾಗಕ್ಕೂ ಮುನ್ನವೇ ತಮ್ಮ ಕನಸಾಗಿದ್ದ ಜಾತಿ ಗಣತಿ ವರದಿಯನ್ನು ಸ್ವೀಕರಿಸಿ ಗಮನಸೆಳೆದಿದ್ದಾರೆ.

ಬೆಂಗಳೂರು, (ಮೇ 27): ಕಳೆದ 9 ವರ್ಷಗಳಿಂದ ನಿರಂತರವಾಗಿ ಸಂಚಲನ ಸೃಷ್ಟಿಸಿದ್ದ ಕರ್ನಾಟಕ ಜಾತಿಗಣತಿ ವರದಿಯನ್ನು ಸಿಎಂ ಸಿದ್ದರಾಮಯ್ಯ ) ಸ್ವೀಕರಿಸಿದ್ದಾರೆ. ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುವ ಒಂದು ದಿನ ಮೊದಲೇ ಆಸೆಯದಂತೆ ರಾಜ್ಯ ಹಿಂದುಳಿದ ವರ್ಗಗಳ ಆಯೋಗ ಸಿದ್ದಪಡಿಸಿದ "ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿ" ಯನ್ನು ವಿಧಾನಸೌಧದ ತಮ್ಮ ಕಚೇರಿಯಲ್ಲಿ ಸ್ವೀಕರಿಸಿರುವುದು ವಿಶೇಷ. ಇದರೊಂದಿಗೆ ತಾವು ಅಧಿಕಾರಿದಲ್ಲಿದ್ದಾಗಲೇ ಜಾತಿಗಣತಿ ಸ್ವೀಕಾರ ಮಾಡಿದ ಎಂಬ ಹೆಗ್ಗಳಿಕೆಗೆ ಪಾತ್ರರಾಗಿದ್ದಾರೆ. ಇನ್ನು ತೀವ್ರ ಕುತೂಹಲಕ್ಕೆ ಕಾರಣವಾಗಿದ್ದ ಜಾತಿವಾರು ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ ವರದಿ (ಜಾತಿ ಗಣತಿ) ಬಹಿರಂಗವಾಗಿದ್ದು, ವರದಿ ಪ್ರಕಾರ ಮುಸ್ಲಿಮರೇ ರಾಜ್ಯದಲ್ಲಿ ಅತಿ ಹೆಚ್ಚು ಜನಸಂಖ್ಯೆ ಹೊಂದಿರುವ ಸಮುದಾಯವಾಗಿದೆ.

**ಮುಸ್ಲಿಮರೇ ನಂ.1**

ಹಿಂದುಳಿದ ವರ್ಗಗಳ ಆಯೋಗದ ಅಧ್ಯಕ್ಷ ಮಧುಸೂದನ್ ನಾಯ್ಕ್ ಅವರು ಸಿಎಂ ಸಿದ್ದರಾಮಯ್ಯವರಿಗೆ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆ ವರದಿ ನೀಡಿದ್ದು, ಈ ಜಾತಿಗಣತಿ ಪ್ರಕಾರ, ರಾಜ್ಯದಲ್ಲಿ ಮುಸ್ಲಿಂ ಅತಿ ದೊಡ್ಡ ಸಮುದಾಯವಾಗಿದೆ. ಶೇ.14ರಷ್ಟು ಅಂದರೆ ಬರೋಬ್ಬರಿ 75.25 ಲಕ್ಷ ಜನಸಂಖ್ಯೆ ಇದ್ದಾರೆ ಎಂದು ವರದಿಯಲ್ಲಿ ಉಲ್ಲೇಖವಾಗಿದೆ.

ಜಾತಿವಾರು ಜನಸಂಖ್ಯೆ ವಿವರ

ಇನ್ನು ಮುಸ್ಲಿಮರು 75 ರಿಂದ 80 ಲಕ್ಷ ಜನಸಂಖ್ಯೆಯೊಂದಿಗೆ ಕರ್ನಾಟಕದಲ್ಲಿ ನಂಬರ್ ಒನ್ ಪ್ರಬಲ ಸಮುದಾಯವಾಗಿದೆ.



ವೀರಶೈವ ಲಿಂಗಾಯತ ಶೇ.11ರಷ್ಟು 60 ರಿಂದ 65 ಲಕ್ಷ ಜನಸಂಖ್ಯೆ ಹೊಂದಿದ್ದು ಕರ್ನಾಟಕದಲ್ಲಿ ಎರಡನೇ ಅತಿ ದೊಡ್ಡ ಸಮುದಾಯವಾಗಿದ್ದರೆ, ಶೇ.10ರೊಂದಿಗೆ ಒಕ್ಕಲಿಗರು 55 ರಿಂದ 60 ಲಕ್ಷ ಜನಸಂಖ್ಯೆ ಹೊಂದಿದ 3ನೇ ಸಮುದಾಯವಾಗಿದೆ. ಇನ್ನು ಕುರುಬರು ಸಮುದಾಯ ಶೇ.8ರಷ್ಟು ಇದ್ದು, 40 ರಿಂದ 45 ಲಕ್ಷ ಜನಸಂಖ್ಯೆ ಹೊಂದಿಗೆ ರಾಜ್ಯದ 4ನೇ ದೊಡ್ಡ ಸಮುದಾಯವಾಗಿದೆ ಎಂದು ಸರ್ಕಾರಕ್ಕೆ ಸಲ್ಲಿಸಿದ ವರದಿಯಲ್ಲಿ ಜಾತಿವಾರು ಜನಸಂಖ್ಯೆ ಬಗ್ಗೆ ಉಲ್ಲೇಖವಾಗಿದೆ.

## ಸಿಎಂ ಸಿದ್ಧರಾಮಯ್ಯ ಇಂದು ರಾಜಿನಾಮೆ

ಬೆಂಗಳೂರು: ರಾಜ್ಯದ ನಾಯಕತ್ವದ ವಿಚಾರದಲ್ಲಿ ಕಾಂಗ್ರೆಸ್ ಹೈಕಮಾಂಡ್ ಮಹತ್ವದ ನಿರ್ಧಾರ ಕೈಗೊಂಡಿದೆ. ಗುರುವಾರವೇ ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡುವ ಸಾಧ್ಯತೆ ಹೆಚ್ಚಿದೆ. ಶೀಘ್ರದಲ್ಲಿಯೇ ಕರ್ನಾಟಕಕ್ಕೆ ಹೊಸ ಸಿಎಂ ಆಯ್ಕೆಯಾಗಲಿದ್ದು, 4 ಮಂದಿ ಡಿಸಿಎಂ ಆಗಿ ಅಧಿಕಾರ ನಡೆಸಲಿದ್ದಾರೆ ಎಂದು ಮೂಲಗಳು ತಿಳಿಸಿವೆ.

**ಡಿಕೆ ಶಿವಕುಮಾರ್ ಬಿಟ್ಟರೆ ಸಿಎಂ ಸ್ಥಾನಕ್ಕೆ ಪ್ರಮುಖ ಹೆಸರು ಯಾರದ್ದು?**

ಸಿಎಂ ಸ್ಥಾನಕ್ಕೆ ಕಳೆದ 3 ವರ್ಷದಿಂದ ಹೋರಾಟ ನಡೆಸುತ್ತಿರುವ ಡಿಕೆ ಶಿವಕುಮಾರ್ ಹೆಸರು ಮುಂಚೂಣಿಯಲ್ಲಿದೆ. ಅವರನ್ನು ಬಿಟ್ಟರೆ ಡಾ. ಜಿ ಪರಮೇಶ್ವರ್ ಅವರು ಹೆಸರು ಕೇಳಿ ಬರುತ್ತಿದೆ. ಇನ್ನೂ ಕಾಂಗ್ರೆಸ್ ಪಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಅವಕಾಶ ಕೊಟ್ಟು ಗೌರವ ಸಲ್ಲಿಸುವ ನಿಟ್ಟಿನಲ್ಲಿಯೂ ಚಿಂತನೆ ನಡೆಸುತ್ತಿದೆ.

# ಇದು ರೈತರ ಹೋರಾಟವಲ್ಲ, ನನ್ನ ಹೋರಾಟ : ನಿಖಿಲ್ ಜಿಬಿಎ ಭೂಸ್ವಾಧೀನ ವಿರುದ್ಧದ ಹೋರಾಟಕ್ಕೆ ಬೆಂಬಲ

## ರಿಯಾಲಿಟಿ ಚೆಕ್, ರೈತರೊಡನೆ ಸಂವಾದ। ಧೃತಿಗೆಡಬೇಡಿ ನಿಮ್ಮೊಂದಿಗೆ ನಾವಿದ್ದೇವೆ ನಿಖಿಲ್ ಅಭಯ

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ : ಮಣ್ಣಿನಮಗ ಹೆಚ್.ಡಿ.ಕುಮಾರಸ್ವಾಮಿ ಅವರ ಮಗನಾಗಿ, ನಾನು ನಿಮಗೆ ಮಾತು ನೀಡುತ್ತಿದ್ದೇನೆ. ಇಂದಿನಿಂದ ಇದು ನಿಮ್ಮ ಹೋರಾಟ ಮಾತ್ರವಲ್ಲ ನನ್ನ ಹೋರಾಟ. ಸರ್ಕಾರ ತಂದೊಡ್ಡಿರುವ ಸಮಸ್ಯೆಗೆ ತಾರ್ಕಿಕ ಅಂತ್ಯ ಕಾಣಿಸುವುದೇ ನನ್ನ ಗುರಿ ಎಂದು ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ರೈತರಿಗೆ ಆಶ್ವಾಸನೆ ನೀಡಿದರು.

ಬೈರಮಂಗಲ ಗ್ರಾಮದಲ್ಲಿ ಜಿಬಿಎ ಭೂಸ್ವಾಧೀನ ವಿರೋಧಿಸಿ ರೈತರು ನಡೆಸುತ್ತಿರುವ ಧರಣಿಗೆ ಬೆಂಬಲ ಘೋಷಿಸಿದಲ್ಲದೇ ಜಿಬಿಎ ಭೂಸ್ವಾಧೀನ ಪಡಿಸಿಕೊಳ್ಳಲು ಹೊರಟಿರುವ ಭೂಮಿಗಳ ರಿಯಾಲಿಟಿ ಚೆಕ್ ನಡೆಸಿದರು. ಇದಕ್ಕೂ ಮುನ್ನ ಬೈರಮಂಗಳ ವೃತ್ತದ ಬಳಿ ರೈತರನ್ನುದ್ದೇಶಿಸಿ ಮಾತನಾಡಿದ ಅವರು, ರೈತರನ್ನು ವಿಶ್ವಾಸಕ್ಕೆ ಪಡೆಯದೇ, ರೈತರನ್ನು ಒಕ್ಕಲೆಬ್ಬಿಸಲು ಹೊಂಚು ಹಾಕುತ್ತಿರುವ ಸರ್ಕಾರದ ವಿರುದ್ಧ ನಿಮ್ಮಗಳ ಜತೆಗೆ ನಾನೂ ಕೂಡ ಹೋರಾಟ ಮಾಡುತ್ತೇನೆ ಎಂದು ಧೈರ್ಯ ತುಂಬಿದರು.



**ಅಧಿಕಾರ ನೀವು ನೀಡಿರುವ ಭಿಕ್ಷೆ** : ಅವರು ಕುಳಿತಿರುವ ಕುರ್ಚಿ ನೀವು ನೀಡಿರುವ ಭಿಕ್ಷೆ. ಅದನ್ನು ಮರೆತರೆ ಯಾರೂ ಕೂಡ ರಾಜಕೀಯದಲ್ಲಿ ಮುಂದುವರಿಯಲು ಅಸಾಧ್ಯ. ನಿಮ್ಮ ಜಮೀನು ಕಸಿಯಲು ಬಂದಿರುವವರು ಇದನ್ನು ಅರ್ಥ ಮಾಡಿಕೊಳ್ಳಬೇಕು. ನೀವು ಏಕಾಂಗಿಯಲ್ಲ ನಿಮ್ಮ ಹಿಂದೆ ಇಡೀ ಕನ್ನಡ ನಾಡಿನ ಏಳು ಕೋಟಿ ಜನ ಇದ್ದಾರೆ. ನೀವು ಯಾವುದೇ ಕಾರಣಕ್ಕೂ ಧೈರ್ಯಗೆಡಬೇಡಿ ಎಂದು ಹೇಳಿದರು. **ನಿಮ್ಮೊಂದಿಗೆ ನಾನಿದ್ದೇನೆ** : ಈ ತಿಂಗಳ ಅಂತ್ಯಕ್ಕೆ ಅಂತಿಮ ಅಧಿಸೂಚನೆಗೆ ಸಿದ್ಧತೆ ನಡೆದಿದೆ, ರೈತರು ಯಾವುದೇ ಕಾರಣಕ್ಕೂ ಧೃತಿಗೆಡಬೇಡಿ, ಎಂತಹ ಸನ್ನಿವೇಶ ಬಂದರೂ ನಾನು, ನಮ್ಮ ಕುಟುಂಬ ನಿಮ್ಮ ಜತೆಗೆ ಸದಾ ಕಾಲ ಇರುತ್ತೇವೆ. ರಾಜ್ಯದ ಒಬ್ಬ ಪ್ರಜೆಯಾಗಿ, ಒಬ್ಬ ಕನ್ನಡಿಗನಾಗಿ, ಈ ಜಿಲ್ಲೆಯ ಮತದಾರನಾಗಿ ನಾನು ನಿಮ್ಮೊಡನಿರುತ್ತೇನೆ ಎಂದು ಭರವಸೆ ನೀಡಿದರು.

### ಯಾರೇ ಸಿಎಂ ಆದರೂ ದುರಾಡಳಿತ ತಪ್ಪಿದಲ್ಲ

ರಾಮನಗರ : ಯಾರೇ ಸಿಎಂ ಆದರೂ ಕಾಂಗ್ರೆಸ್ ಪಕ್ಷದವರೇ ಆಗ್ತಾರೆ ಎಂದು ಡಿಕೆಶಿ ಸಿಎಂ ವಿಚಾರವಾಗಿ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸಿದ ನಿಖಿಲ್ ಕುಮಾರಸ್ವಾಮಿ, ಕಾಂಗ್ರೆಸ್‌ನವರಿಗೆ 136 ಶಾಸಕ ಬೆಂಬಲ ಇದ್ದು, ಮೆಜಾರಿಟಿ ಇದೆ. ಯಾರು ಸಿಎಂ, ಯಾರು ಡಿಸಿಎಂ, ಯಾರು ಮಂತ್ರಿಗಳಾಗ್ತಾರೆ ಅನ್ನುವುದು ಮುಖ್ಯ ಅಲ್ಲ. ಯಾರೇ ಸಿಎಂ ಆದರೂ, ದುರಾಡಳಿತ, ಭ್ರಷ್ಟಾಚಾರ, ಲೂಟಿ, ರೈತರ ಬವಣೆ ತಪ್ಪುವುದಿಲ್ಲ ಎಂದು ಕಿಡಿ ಕಾರಿದರು.



**ಸ್ವಾಭಿಮಾನದ ಹೋರಾಟ** : ಭೂಸ್ವಾಧೀನ ವಿರೋಧಿ 2 ಗ್ರಾಮ ಪಂಚಾಯಿತಿ ವ್ಯಾಪ್ತಿಯ 26 ಗ್ರಾಮಗಳ ಜನರು ಕಳೆದ 436 ದಿನಗಳಿಂದ ಹೋರಾಟ ಮಾಡುತ್ತಿದ್ದೀರಿ. ಇದು ಕೇವಲ ಭೂಮಿ ಉಳಿಸಿಕೊಳ್ಳುವ ಹೋರಾಟ ಮಾತ್ರವಲ್ಲ. ಇದು ರೈತರ ಸ್ವಾಭಿಮಾನದ ಹೋರಾಟ. ಯಾವುದೇ ರಾಜಕಾರಣಿ ಉನ್ನತ ಸ್ಥಾನ ಗಳಿಸಲು ಸಂಪೂರ್ಣ ಬೆಂಬಲ ನೀಡುವುದು ರಾಮನಗರ ಜಿಲ್ಲೆ ಮಾತ್ರ. ನಮ್ಮ ತಂದೆ ಕುಮಾರಸ್ವಾಮಿ ಅವರು ಕಡೆಯ ಉಸಿರಿರುವ ತನಕವೂ ನೆನಪಿಸಿಕೊಳ್ಳುತ್ತಾರೆ. ಇದನ್ನು ನಾನು ಕೇವಲ ರಾಜಕೀಯಕ್ಕೆ ಹೇಳುತ್ತಿಲ್ಲ. ನಮ್ಮ ಕುಟುಂಬದ ಮನದಾಳದ ಮಾತು. ನನಗಾಗಲೀ, ನನ್ನ ಕುಟುಂಬಕ್ಕಾಗಲೀ, ನಮ್ಮ ಪಕ್ಷಕ್ಕಾಗಲೀ ರಾಜಕೀಯ ಲಾಭ ಪಡೆಯುವ ದುರುದ್ದೇಶದಿಂದ ನಾನು ಇಲ್ಲಿಗೆ ಬಂದಿಲ್ಲ ಎಂದರು. ರಾಜ್ಯ ಸರ್ಕಾರ ನಿಮ್ಮ ಮೇಲೆ ಮಾಡುತ್ತಿರುವ ದಬ್ಬಾಳಿಕೆ ಹಾಗೂ ಸರ್ಕಾರದ ವಿರುದ್ಧ ರೈತರು ಮಾಡುತ್ತಿರುವ ಹೋರಾಟಕ್ಕೆ ಬೆಂಬಲ ನೀಡುವ ಜತೆಗೆ ದಪ್ಪ ಚರ್ಮದ ಸರ್ಕಾರವನ್ನು ಎಚ್ಚರಿಸಲು ನಾನಿಲ್ಲಿಗೆ ಆಗಮಿಸಿದ್ದೇನೆ.



ರೈತರಿಗೆ ಭೂಮಿಯೇ ತಂದೆ, ತಾಯಿ, ದೈವ ಎಲ್ಲವೂ ಆಗಿದೆ. ಪೂರ್ವಜರ ಕಾಲದಿಂದಲೂ ಅದೇ ಭೂಮಿಯಲ್ಲಿ ವ್ಯವಸಾಯ ಮಾಡಿಕೊಂಡು ಬದುಕು ಕಟ್ಟಿಕೊಂಡಿದ್ದೀರಿ. ಸರ್ಕಾರ ಈ ಭಾಗದ 9600 ಎಕರೆ ಭೂಮಿಯನ್ನು ಸ್ವಾಧೀನ ಪಡಿಸಿಕೊಳ್ಳಲು ಹುನ್ನಾರ ನಡೆಸುತ್ತಿದೆಯೋ ಅದರ ವಿರುದ್ಧ ನೀವು ಮಾಡುತ್ತಿರುವ ಹೋರಾಟದಲ್ಲಿ ನಾನೂ ಕೂಡ ಭಾಗಿಯಾಗಲು ಬಂದಿದ್ದೇನೆ ಎಂದು ಹೇಳಿದರು.

**ಜನಪರ ಆಡಳಿತ ನೀಡಿದ್ದ ಹೆಚ್‌ಡಿಕೆ** : ನಮ್ಮ ತಂದೆ ಕುಮಾರಸ್ವಾಮಿ ಅವರು ಎರಡು ಬಾರಿ ಅಲ್ಪ ಕಾಲಕ್ಕೆ ಮುಖ್ಯಮಂತ್ರಿ ಆಗಿದ್ದರು. ಈ ವೇಳೆ ಜನರ ಧ್ವನಿಯಾಗಿ, ಜನಪರವಾದ ಆಡಳಿತ ನೀಡಿದ್ದರು. ಇದನ್ನು ನಾನು ಹೇಳುತ್ತಿಲ್ಲ. ನಾನು ಗ್ರಾಮೀಣ ಭಾಗಕ್ಕೆ ತೆರಳಿದಾಗ ಅಲ್ಲಿನ ಜನರು ಹೇಳುವ ಮಾತು. ಈ ಯೋಜನೆ ಕುಮಾರಸ್ವಾಮಿ ಅವರ ಕನಸಿನ ಕೂಸು ಎಂಬುದಾಗಿ ಬಿಂಬಿಸಿ, ಅದನ್ನು ಅವರ ತಲೆಗೆ ಕಟ್ಟಲು ಈ ಯೋಜನೆಯನ್ನು ಜಾರಿಗೆ ಮುಂದಾಗಿರುವ ಜನಪ್ರತಿನಿಧಿಗಳು ಹೇಳುತ್ತಿದ್ದಾರೆ. 2006ರಲ್ಲಿ ಯೋಜನೆ ಮುಂದಾಗಿದ್ದು ನಿಜ. ಆದರೆ, ರೈತರ ಭಾವನೆಗಳಿಗೆ ಬೆಲೆ ನೀಡಿ ಯೋಜನೆಯನ್ನು ಕೈಬಿಡಲಾಗಿತ್ತು. ಒಂದು ವೇಳೆ ಈ ಯೋಜನೆ ಮುಂದುವರಿಸಬೇಕು ಎಂಬ ದುರುದ್ದೇಶ ಕುಮಾರಸ್ವಾಮಿ ಅವರಿಗಿದ್ದಿದ್ದರೆ 2018ರಲ್ಲಿ ಎರಡನೇ ಬಾರಿಗೆ ಸಿಎಂ ಆಗಿದ್ದಾಗ ಆ ಯೋಜನೆಯನ್ನು ಮುಂದುವರಿಸುತ್ತಿದ್ದರು. ನಮ್ಮ ಕುಟುಂಬ ಆಗಲೀ, ನಮ್ಮ ಪಕ್ಷವಾಗಲೀ ಎಂದೆಂದಿಗೂ ರೈತಪರವಾಗಿಯೇ ರಾಜಕೀಯ ಮಾಡಿದ್ದೇವೆ. ರೈತರಿಗಾಗಿಯೇ ಇರುವ ಏಕೈಕ ಪಕ್ಷ ನಮ್ಮ ಜೆಡಿಎಸ್. ಹಾಗಾಗಿ ನಮ್ಮ, ನಮ್ಮ ಪಕ್ಷದ ವಿರುದ್ಧದ ಸುಳ್ಳು ವದಂತಿಗಳಿಗೆ ಕಿವಿಗೊಡಬೇಡಿ ಎಂದು ಮನವಿ ಮಾಡಿದರು.

**ಶೋ ಕೊಡಲು ಬಂದಿಲ್ಲ** : ನಾನು ಶೋ ಕೊಟ್ಟು ಹೋಗಲು ಇಲ್ಲಿಗೆ ಬಂದಿಲ್ಲ. ಸರ್ಕಾರಕ್ಕೆ ಯೋಜನೆಯನ್ನು ಹಿಂಪಡೆಯುವ ಮನಸ್ಥಿತಿ ಇಲ್ಲ. ಇದು ನಿಮಗೂ ತಿಳಿದಿರುವ ವಿಚಾರ. ಆದರೆ, ನಾವು ಈ ನೆಲದ ಕಾನೂನಿನ ಪ್ರಕಾರವೇ ಹೋರಾಟ ಮಾಡೋಣ. ಯಾರೂ ಧೈರ್ಯಗೆಡುವುದು ಬೇಡ. ಯಾವುದೇ ಜನಪ್ರತಿನಿಧಿಗಳಾಗಲೀ, ಸರ್ಕಾರಿ ಅಧಿಕಾರಿಗಳಾಗಲೀ ನಮ್ಮ ಗ್ರಾಮಕ್ಕೆ ಆಗಮಿಸಿ ನೀವು ಯೋಜನೆಗೆ ಜಮೀನು ನೀಡಲು ಸಿದ್ಧರಿದ್ದೀರಾ ಎಂಬುದಾಗಿ ಕೇಳಿಲ್ಲ. ಪ್ರತಿಭಟನೆ ಮಾಡುತ್ತಿರುವವರು ರೈತರೇ ಅಲ್ಲ, ಇಲ್ಲಿ ಯಾರೂ ವ್ಯವಸಾಯವನ್ನೇ ಮಾಡುತ್ತಿಲ್ಲ ಎಂಬುದಾಗಿ ಸುಳ್ಳನ್ನು ಹರಡುವ ಕೆಲಸ ಮಾಡುತ್ತಿದ್ದಾರೆ. ಆದರೆ, ನಮ್ಮ ಮಾಧ್ಯಮ ಮಿತ್ರರು ವಿಡಿಯೋ ಮೂಲಕ ಅದೆಲ್ಲವೂ ಸುಳ್ಳು ಎಂಬುದನ್ನು ಸಾಬೀತು ಮಾಡಿದ್ದಾರೆ. ಯಾವುದೇ ಕಾರಣಕ್ಕೂ ರೈತರನ್ನು ಒಕ್ಕಲೆಬ್ಬಿಸಲು ಬಿಡಲ್ಲ ಎಂದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಎ.ಮಂಜುನಾಥ್, ಜೆಡಿಎಸ್ ಜಿಲ್ಲಾಧ್ಯಕ್ಷ ಜಯಮುತ್ತು, ರಾಮನಗರ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಸಬ್ಬಕೆರೆ ಶಿವಲಿಂಗಪ್ಪ, ಚನ್ನಪಟ್ಟಣ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಗೋವಿಂದಳ್ಳಿ ನಾಗರಾಜು, ಬಿಡದಿ ಪುರಸಭೆ ಸ್ಥಾಯಿ ಸಮಿತಿ ಅಧ್ಯಕ್ಷ ದೇವರಾಜು, ಸದಸ್ಯರಾದ ರಾಕೇಶ್, ಹರಿಪ್ರಸಾದ್, ಮುಖಂಡರಾದ ಡಾ.ಭರತ್ ಕೆಂಪಣ್ಣ, ನರಸಿಂಹಯ್ಯ, ಲಕ್ಷ್ಮೀಕಾಂತ್, ಬಿ.ಉಮೇಶ್, ಬೋರೇಗೌಡ, ಗೌಡಯ್ಯನದೊಡ್ಡಿ ಕೃಷ್ಣೇಗೌಡ, ಬೈರಮಂಗಳ ಕಂಚುಗಾರನಹಳ್ಳಿ ಭೂ ಹಿತರಕ್ಷಣಾ ಸಂಘದ ಅಧ್ಯಕ್ಷ ರಾಮಣ್ಣ, ಖಜಾಂಚಿ ನಾಗರಾಜು, ರೈತ ಮುಖಂಡರಾದ ಶ್ರೀನಿವಾಸ ರೆಡ್ಡಿ, ರಾಧಾಕೃಷ್ಣ, ಅಶ್ವತ್ಥ್, ಕೃಷ್ಣ, ಜಯಮ್ಮ, ಸುಮಿತ್ರ, ಭಾಗ್ಯ ನಾಗರಾಜ್, ಮಂಜುನಾಥ್, ಹೇಮಂತ್, ಜ್ಯೋತಿ, ಚೈತ್ರಾ, ರಾಮಚಂದ್ರ, ಗಿರೀಶ ಮತ್ತಿತರರು ಇದ್ದರು.

ಹೊನ್ನಪ್ಪ ಅವರ ಜಮೀನಿನಲ್ಲಿ ಟ್ರ್ಯಾಕ್ಟರ್ ಓಡಿಸಿ, ರೈತರ ಸಂಕಷ್ಟವನ್ನು ಆಲಿಸಿ, "ನಿಮ್ಮೊಂದಿಗೆ ನಾವೆಲ್ಲರೂ ಇದ್ದೇವೆ" ಎಂದು ಧೈರ್ಯ ತುಂಬಿದರು.

# ಸಿದ್ದರಾಮಯ್ಯ ರಾಜೀನಾಮೆ ; 31 ಕೆಪಿಸಿಸಿ ಪದಾಧಿಕಾರಿಗಳಿಗೆ ಗೇಟ್‌ಪಾಸ್

ಸೂರ್ಯಪ್ರಗತಿನ್ಯೂಸ್.ಕಾಂ

ಕರ್ನಾಟಕ ಕಾಂಗ್ರೆಸ್‌ನಲ್ಲಿ ಮಹತ್ವದ ರಾಜಕೀಯ ಬೆಳವಣಿಗೆಗಳು ನಡೆಯುತ್ತಿವೆ. ನಾಯಕತ್ವ ಬದಲಾವಣೆ ಕಾಂಗ್ರೆಸ್ ಹೈಕಮಾಂಡ್ ಮುಂದಾಗಿದ್ದು, ಈ ಸಂಬಂಧ ಸುದೀರ್ಘ ಸರಣಿ ಸಭೆ ನಡೆಸಿ ಸಿದ್ದರಾಮಯ್ಯನವರಿಗೆ ರಾಜೀನಾಮೆ ನೀಡಲು ಸೂಚಿಸಲಾಗಿದೆ ಎಂದು ತಿಳಿದುಬಂದಿದೆ. ಇದು ರಾಜ್ಯ ರಾಜಕಾರಣದಲ್ಲಿ ಭಾರೀ ಸಂಚಲನವನ್ನುಂಟು ಮಾಡಿದೆ. ಇದರ ಮಧ್ಯೆ ಕೆಪಿಸಿಸಿ ವಕ್ತಾರ ನಿಕೇತ್ ಮೌರ್ಯ, ನಟಿ ಭಾವನಾ ರಾಮಣ್ಣ ಸೇರಿದಂತೆ 31 ಕೆಪಿಸಿಸಿ ಪದಾಧಿಕಾರಿಗಳಿಗೆ ಡಿಕೆ ಶಿವಕಿಮಾರ್ ಗೇಟ್‌ಪಾಸ್ ನೀಡಿದ್ದಾರೆ. ಕರ್ನಾಟಕ ಕಾಂಗ್ರೆಸ್ ನಾಯಕತ್ವ ಬದಲಾವಣೆ ರಾಜಕೀಯ ಬೆಳವಣಿಗೆಗಳು ತೀವ್ರ ಸ್ವರೂಪ ಪಡೆದುಕೊಂಡಿದ್ದು, ನಾಳೆ (ಮೇ 28) ಸಿದ್ದರಾಮಯ್ಯನವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಲಿದ್ದಾರೆ. ಈ ಬಗ್ಗೆ ಅಧಿಕೃತವಾಗಿ ಲೋಕಭವನದ ಸಮಯ ಕೇಳಿದ್ದಾರೆ. ಈ ಎಲ್ಲಾ ಮಹತ್ವದ ಬೆಳವಣಿಗೆಗಳ ನಡುವೆ ಕೆಪಿಸಿಸಿ ಅಧ್ಯಕ್ಷ ಡಿಕೆ ಶಿವಕುಮಾರ್, ಕೆಪಿಸಿಸಿ ವಕ್ತಾರ ನಿಕೇತ್ ಮೌರ್ಯ, ನಟಿ ಭಾವನಾ ರಾಮಣ್ಣ ಸೇರಿದಂತೆ 31 ಕೆಪಿಸಿಸಿ ಪದಾಧಿಕಾರಿಗಳಿಗೆ ಗೇಟ್‌ಪಾಸ್ ಕೊಟ್ಟಿದ್ದಾರೆ. ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಸಭೆಗೆ ಗೈರು ಹಾಜರಿ ಹಿನ್ನೆಲೆಯಲ್ಲಿ ಈ ಕ್ರಮಕೈಗೊಂಡಿದ್ದಾರೆ.



ಕೆಪಿಸಿಸಿ ವಕ್ತಾರ ನಿಕೇತ್ ರಾಜ್ ಮೌರ್ಯ, ಭಾವನಾ ರಾಮಣ್ಣ, ಶಿವಮೂರ್ತಿ ನಾಯಕ್, ಎಂ ಸಿ ವೇಣುಗೋಪಾಲ್, ಷಣ್ಮುಖ ಶಿವಳ್ಳಿ, ಸಿಆರ್ ಮನೋಹರ್ ಸೇರಿದಂತೆ ಮೂವರು ಕೆಪಿಸಿಸಿ ಉಪಾಧ್ಯಕ್ಷರು, 29 ಪ್ರಧಾನ ಕಾರ್ಯದರ್ಶಿಗಳಿಗೆ ಡಿಕೆಶಿವಕುಮಾರ್ ಗೇಟ್ ಪಾಸ್ ನೀಡಿದ್ದಾರೆ.ತಕ್ಷಣವೇ ಈ ನಾಯಕರನ್ನು ಪಕ್ಷದ ಹುದ್ದೆಯಿಂದ ಕೈ ಬಿಡಲಾಗಿದೆ ಎಂದು ಎಂದು ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ಕಾಡು ಬೆಳಸಿ
ನಾಡು ಉಳಿಸಿ

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬೀಮಾ(ವಿಮಾ) ಯೋಜನೆಗೆ ಬೆಳೆ ಕಟಾವು ಪ್ರಯೋಗಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಡಿ.ಸಿ. ಸೂಚನೆ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: 2025–26ನೇ ಸಾಲಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬೀಮಾ(ವಿಮಾ) ಯೋಜನೆಗೆ ಬೆಳೆ ಕಟಾವು ಪ್ರಯೋಗಗಳ ಪರಿಣಾಮಕಾರಿ ಅನುಷ್ಠಾನಗೊಳಿಸಲಾಗಿದ್ದು, ಅದೇ ರೀತಿ 2026–27ನೇ ಸಾಲಿನಲ್ಲಿ ಯಾವುದೇ ಪ್ರಯೋಗಗಳು ನಷ್ಟವಾಗದಂತೆ ಕ್ರಮವಹಿಸಲು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಸೂಚಿಸಿದರು.

ಬುಧವಾರ ಗೂಗಲ್ ಮೀಟ್ ಮೂಲಕ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಮಾತನಾಡಿದ ಅವರು, 2025–26ನೇ ಸಾಲಿನ ಬೆಳೆ ಸಮೀಕ್ಷೆಯ ಶೇ.1ರಷ್ಟು ದತ್ತಾಂಶ ಪರಿಶೀಲನೆಯನ್ನು ಪೂರ್ಣಗೊಳಿಸಲಾಗಿದ್ದು, 2026–27ನೇ ಸಾಲಿನ ಬೆಳೆ ಸಮೀಕ್ಷೆಯ ಶೇ.1ರಷ್ಟು ದತ್ತಾಂಶ ಪರಿಶೀಲನೆಯನ್ನು ಸಹ ಪರಿಪೂರ್ಣವಾಗಿ ಅನುಷ್ಠಾನಗೊಳಿಸುವಂತೆ ಅವರು ಅಧಿಕಾರಿಗಳಿಗೆ ಸೂಚಿಸಿದರು.




ತುಮಕೂರು ಜಿಲ್ಲೆಯಲ್ಲಿ 11ನೇ ಕೃಷಿ ಗಣತಿ ಕಾರ್ಯವು ಯಶಸ್ವಿಯಾಗಿ ಪೂರ್ಣಗೊಂಡಿದೆ. 11ನೇ ಕೃಷಿ ಗಣತಿಯನ್ನು 3 ಹಂತದಲ್ಲಿ ಕೈಗೊಳ್ಳಲಾಗಿದ್ದು, ತುಮಕೂರು ಜಿಲ್ಲೆ ಎಲ್ಲಾ ಹಂತಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ ಹಾಗೂ ಈಗಾಗಲೇ ಮೂಲಕಾರ್ಯಕರ್ತರಿಗೆ 1ನೇ ಹಂತದ ಗೌರವಧನವನ್ನು ಪಾವತಿಸಲಾಗಿದೆ ಹಾಗೂ ಉಳಿದ ಹಂತಗಳಿಗೂ ಕೂಡ ಶೀಘ್ರದಲ್ಲಿ ಗೌರವಧನ ಪಾವತಿಸಲಾಗುವುದು ಎಂದು ತಿಳಿಸಿದರು.

ನಾಗರೀಕ ನೋಂದಣಿ ಪದ್ಧತಿಯಲ್ಲಿ ಜನನ ಮರಣ ದಾಖಲಾತಿಯನ್ನು ಯಾವುದೇ ಲೋಪದೋಷಗಳಿಲ್ಲದಂತೆ ಶೇ.100ರಷ್ಟು ನೋಂದಣಿ ಮಾಡಲು ಕ್ರಮವಹಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಡಿ.ರಂಗಸ್ವಾಮಿ, ಸಹಾಯಕ ನಿರ್ದೇಶಕ(ಸಾಂಖ್ಯಿಕ) ಸೇರಿದಂತೆ ಕಂದಾಯ, ಕೃಷಿ, ತೋಟಗಾರಿಕೆ, ಆರೋಗ್ಯ ಇಲಾಖೆಯ ಅಧಿಕಾರಿಗಳು ಭಾಗವಹಿಸಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಜಮೀನು ಭಾಗದ ವಿಚಾರಕ್ಕೆ ಚಾಕುವಿನಿಂದ ಚುಚ್ಚಿ ಕೊಲೆ ಕೊಲೆ ಆರೋಪಿಯನ್ನ ಸೆರೆ ಹಿಡಿದ ಕೊರಟಗೆರೆ ಪೋಲಿಸರು

ಕೋಳಾಲ ಪೊಲೀಸ್ ಠಾಣೆಯಲ್ಲಿ ದಿನಾಂಕ:25/05/2026 ರಂದು ರಾತ್ರಿ ಸುಮಾರು 09–30 ಗಂಟೆಯಲ್ಲಿ ಕೋಳಾಲ ಹೋಬಳಿಯ ಕಂತೆವಡೇರಹಳ್ಳಿ ಗ್ರಾಮದ ರಾಮಕೃಷ್ಣಯ್ಯನವರ ಮನೆ ಬಳಿ ಇರುವ ಸೇತುವೆ ಹತ್ತಿರ ದೇವರಾಜು ರವರ ಮಕ್ಕಳಾದ ವಿಷ್ಣುಕುಮಾರ್, ಬೈಲಹನುಮಯ್ಯ ಇಬ್ಬರೂ ಕುಡಿದು ಜಮೀನು ಭಾಗದ ವಿಚಾರ ಮತ್ತು ವಾಹನಗಳನ್ನು ಮಾರಾಟ ಮಾಡಿದ ವಿಚಾರವಾಗಿ ಪರಸ್ಪರ ಗಲಾಟೆ ಮಾಡಿಕೊಂಡು ವಿಷ್ಣು ಕುಮಾರ್ ರವರು ಕೊಲೆ ಮಾಡುವ ಉದ್ದೇಶದಿಂದ ಬೈಲಹನುಮಯ್ಯನಿಗೆ ಚಾಕುವಿನಿಂದ ಚುಚ್ಚಿ, ದೊಣ್ಣೆಯಿಂದ ಹೊಡೆದು ರಕ್ತ ಗಾಯ ಪಡಿಸಿ ಕೊಲೆ ಮಾಡಿರುತ್ತಾನೆಂದು ಮೋಹನ್.ಕೆ.ಎನ್.ರವರು ನೀಡಿದ ದೂರಿನ ಮೇರೆಗೆ ದಿನಾಂಕ:26/05/2026 ರಂದು ಕೋಳಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿರುತ್ತೆ.

ಈ ಪ್ರಕರಣವನ್ನು ಪತ್ತೆ ಹಚ್ಚಲು ಮಾನ್ಯ ತುಮಕೂರು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಅಶೋಕ್. ಕೆ.ವಿ. ಐ.ಪಿ.ಎಸ್ ರವರ ಮಾರ್ಗದರ್ಶನದಲ್ಲಿ ಮತ್ತು ಹೆಚ್ಚುವರಿ ಪೊಲೀಸ್ ಅಧೀಕ್ಷಕರುಗಳಾದ ಸಿ.ಗೋಪಾಲ್ ಮತ್ತು ಪುರುಷೋತ್ತಮ. ಎಂ.ಎಲ್. ರವರ ನೇತೃತ್ವದಲ್ಲಿ, ಮಧುಗಿರಿ ಉಪವಿಭಾಗದ ಪೊಲೀಸ್ ಉಪಾಧೀಕ್ಷಕರಾದ ಮಂಜುನಾಥ್.ಜಿ ರವರ ಮಾರ್ಗಸೂಚನೆ ಮೇರೆಗೆ, ಕೊರಟಗೆರೆ ವೃತ್ತ ಪೊಲೀಸ್ ನಿರೀಕ್ಷಕರಾದ ಪುರುಷೋತ್ತಮ್ ರವರು ತನಿಖೆ ಕೈಗೊಂಡಿದ್ದು, ಪಿಎಸ್ಐ ಅಭಿಷೇಕ್.ಎಸ್.ಆರ್ ಮತ್ತು ಸಿಬ್ಬಂದಿಗಳಾದ ಮಧುಕುಮಾರ್ ಬಿ.ಎಲ್ ಮತ್ತು ಪ್ರಕಾಶ್ ಎ.ವಿ ಒಳಗೊಂಡ ಸಿಬ್ಬಂದಿಗಳ ತನಿಖಾ ತಂಡ ದಿನಾಂಕ: 26/05/2026 ರಂದು ಆರೋಪಿಯನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿರುತ್ತದೆ.



ಆರೋಪಿ ಹೆಸರು ಮತ್ತು ವಿಳಾಸ.

ವಿಷ್ಣುಕುಮಾರ್ ಬಿನ್ ಲೇಟ್ ದೇವರಾಜು 38 ವರ್ಷ, ದೊಡ್ಡತಿಮ್ಮಯ್ಯನಪಾಳ್ಯ, ಊರ್ಡಿಗೆರೆ ಹೋಬಳಿ, ತುಮಕೂರು ತಾಲ್ಲೂಕ್ ಪ್ರಕರಣದ ಆರೋಪಿಯನ್ನು ಪತ್ತೆ ಮಾಡಲು ಶ್ರಮಿಸಿದ ಸದರಿ ಪತ್ತೆ ತಂಡವನ್ನು ಮಾನ್ಯ ಪೊಲೀಸ್ ಅಧೀಕ್ಷಕರಾದ ಕೆ.ವಿ.ಅಶೋಕ್, ಐ.ಪಿ.ಎಸ್ ರವರು ಪ್ರಶಂಸಿರುತ್ತಾರೆ.

# ಮಧುಗಿರಿಯನ್ನು ಜಿಲ್ಲೆಯನ್ನಾಗಿಸುವ ಪ್ರಯತ್ನಕ್ಕೆ ಮತ್ತೊಂದು ಮುನ್ನುಡಿ ಬರೆದ ಕೆ.ಎನ್.ರಾಜಣ್ಣ

## ಮಧುಗಿರಿಯಲ್ಲಿ ಅಧಿಕೃತವಾಗಿ ಕೆ.ಎಸ್.ಆರ್.ಟಿ.ಸಿ ವಿಭಾಗೀಯ ಕಚೇರಿ ಕಾರ್ಯ ನಿರ್ವಹಣೆ; ಗ್ರಾಮೀಣ ಪ್ರದೇಶಗಳಿಗೆ ಹೆಚ್ಚಿನ ಬಸ್‌ಸೌಲಭ್ಯ



ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ: ಕಂದಾಯ ಉಪವಿಭಾಗವಾಗಿರುವ ಜಿಲ್ಲೆಯ ಮಧುಗಿರಿಗೆ ಕೆ.ಎಸ್.ಆರ್.ಟಿ.ಸಿ ವಿಭಾಗೀಯ ಕಚೇರಿ ಮಂಜೂರಾಗಿದ್ದು, ಜೂ.1 ರಿಂದ ಮಧುಗಿರಿಯಲ್ಲಿ ಅಧಿಕೃತವಾಗಿ ವಿಭಾಗೀಯ ಕಚೇರಿ ಕಾರ್ಯನಿರ್ವಹಿಸಲಿದ್ದು, ಮಧುಗಿರಿಯನ್ನು ಜಿಲ್ಲೆಯನ್ನಾಗಿಸುವ ಪ್ರಯತ್ನಕ್ಕೆ ಮತ್ತೊಂದು ಮುನ್ನುಡಿ ಎಂದೇ ಸಾರ್ವಜನಿಕ ವಲಯದಲ್ಲಿ ಚರ್ಚೆಯಾಗುತ್ತಿದೆ.

( ((((((ಈ ಭಾಗದಲ್ಲಿ ಕೆ.ಎಸ್.ಆರ್.ಟಿ.ಸಿ ವಿಭಾಗೀಯ ಕಚೇರಿ ಪ್ರಾರಂಭಿಸಬೇಕೆಂದು ಈ ಹಿಂದೆ ಸರ್ಕಾರಕ್ಕೆ ಮನವಿ ಮಾಡಲಾಗಿತ್ತು. ಇತ್ತೀಚೆಗೆ ಮಧುಗಿರಿ ಎಆರ್ ಟಿಒ ಕಚೇರಿಯ ನೂತನ ಕಟ್ಟಡ ಶಂಕುಸ್ಥಾಪನೆ ಕಾರ್ಯಕ್ರಮಕ್ಕೆ ಆಗಮಿಸಿದ್ದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿರವರಿಗೂ ಸಹ ಕೆಎಸ್‌ಆರ್‌ಟಿಸಿ ಸಾರಿಗೆ ವಿಭಾಗೀಯ ಕಚೇರಿ ಮಂಜೂರು ಮಾಡುವಂತೆ ಮನವಿ ಮಾಡಿದ್ದು, ಈ ಹಿನ್ನೆಲೆಯಲ್ಲಿ ವಿಭಾಗೀಯ ಕಚೇರಿ ಮಂಜೂರಾಗಿದ್ದು, ಜೂ. 1 ರಿಂದ ಅಧಿಕೃತವಾಗಿ ವಿಭಾಗೀಯ ಕಚೇರಿ ಕಾರ್ಯನಿರ್ವಹಿಸಲಿದ್ದು, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ, ಕಚೇರಿ ಉದ್ಘಾಟಿಸಲಿದ್ದಾರೆ. ಜೊತೆಗೆ ನಗರ ಸಾರಿಗೆಗೂ ಸಚಿವರು ಚಾಲನೆ ನೀಡಲಿದ್ದಾರೆ.

– ಕೆ.ಎನ್. ರಾಜಣ್ಣ, ಶಾಸಕ.))))))

ತಾಲೂಕಿನಲ್ಲಿ ಬಹು ದಿನಗಳಿಂದಲೂ ನಿರೀಕ್ಷಿತವಾಗಿದ್ದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ) ಸಾರಿಗೆ ವಿಭಾಗೀಯ ಕಚೇರಿ ಮಧುಗಿರಿಗೆ ಮಂಜೂರಾಗಿದ್ದು, ಜೂ.1 ರಂದು ಪಟ್ಟಣದ ಶಿರಾ ಗೇಟ್ ಬಳಿ ಇರುವ ತಾ.ಪಂ ಸಾಮರ್ಥ್ಯ ಸೌಧ ಮತ್ತು ಈ ಹಿಂದಿನ ಪಿಡಬ್ಲ್ಯೂಡಿ ಕಚೇರಿಯಲ್ಲಿ ಅಧಿಕೃತವಾಗಿ ಪ್ರಾರಂಭವಾಗಲಿದ್ದು, ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ಕಚೇರಿಯ ಉದ್ಘಾಟನೆ ನೆರವೇರಿಸಲಿದ್ದಾರೆ. ಇದರಿಂದ ಮಧುಗಿರಿ ಹಾಗೂ ಸುತ್ತಮುತ್ತಲಿನ ಗ್ರಾಮೀಣ ಪ್ರದೇಶಗಳಿಗೆ ಹೆಚ್ಚಿನ ಬಸ್‌ಸೌಲಭ್ಯ ದೊರಕುವ ನಿರೀಕ್ಷೆಯಿದ್ದು, ಅದೇ ದಿನದಂದೇ ನಗರ ಸಾರಿಗೆಗೂ ಸಚಿವರು ಚಾಲನೆ ನೀಡಲಿದ್ದು, ವಿಶೇಷವಾಗಿ ವಿದ್ಯಾರ್ಥಿಗಳು, ಕಾರ್ಮಿಕರು ಹಾಗೂ ಪ್ರಯಾಣಿಕರಿಗೆ ಇದರಿಂದ ಹೆಚ್ಚಿನ ಅನುಕೂಲವಾಗಲಿದೆ.

ಮಧುಗಿರಿಯನ್ನು ಜಿಲ್ಲಾ ಕೇಂದ್ರವನ್ನಾಗಿಸುವ ಉದ್ದೇಶದಿಂದ ಈಗಾಗಲೇ ತಾಲೂಕಿನಲ್ಲಿ ಡಿಸಿ ಕಚೇರಿ ಮತ್ತು ಎಸ್ಪಿ ಕಚೇರಿ ಹೊರತುಪಡಿಸಿ ಎಲ್ಲಾ ಕಚೇರಿಗಳನ್ನೂ ಪ್ರಾರಂಭಿಸಲಾಗಿದ್ದು, ಈ ಭಾಗದಲ್ಲಿ ಕೆ.ಎಸ್.ಆರ್.ಟಿ.ಸಿ ವಿಭಾಗೀಯ ಕಚೇರಿ ಪ್ರಾರಂಭಿಸಬೇಕೆಂದು ಈ ಹಿಂದೆ ಶಾಸಕ ಕೆ.ಎನ್. ರಾಜಣ್ಣನವರು ಸರ್ಕಾರಕ್ಕೆ ಮನವಿ ಮಾಡಿದ್ದರು. ಇದರ ಜೊತೆಗೆ ಈ ಹಿಂದೆ ಮಧುಗಿರಿ ಎಆರ್ ಟಿಒ ಕಚೇರಿಯ ನೂತನ ಕಟ್ಟಡ ಶಂಕುಸ್ಥಾಪನೆ ಕಾರ್ಯಕ್ರಮಕ್ಕೆ ಆಗಮಿಸಿದ್ದ ಸಾರಿಗೆ ಸಚಿವ ರಾಮಲಿಂಗಾರೆಡ್ಡಿ ರವರಿಗೆ ಶಾಸಕ ಕೆ.ಎನ್.ರಾಜಣ್ಣ ಕೆಎಸ್‌ಆರ್‌ಟಿಸಿ ಸಾರಿಗೆ ವಿಭಾಗೀಯ ಕಚೇರಿ ಮಂಜೂರು ಮಾಡುವಂತೆ ಮನವಿ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಕೆಎಸ್‌ಆರ್‌ಟಿಸಿ ಸಾರಿಗೆ ವಿಭಾಗೀಯ ಕಚೇರಿ ಮಂಜೂರಾಗಿದೆ.

ತುಮಕೂರು ಜಿಲ್ಲೆಯು 10 ತಾಲ್ಲೂಕುಗಳನ್ನೊಳಗೊಂಡ ದೊಡ್ಡ ಜಿಲ್ಲೆಯಾಗಿದ್ದು, ಪ್ರಸ್ತುತ ತುಮಕೂರು ವಿಭಾಗದಲ್ಲಿ 7 ಘಟಕಗಳಿಂದ 663 ಅನುಸೂಚಿಗಳು ಕಾರ್ಯಾಚರಣೆಯಾಗುತ್ತಿವೆ ಹಾಗೂ ತುಮಕೂರು ಜಿಲ್ಲೆಯ ಗುಬ್ಬಿ, ಚಿಕ್ಕನಾಯಕನಹಳ್ಳಿ ತಾಲ್ಲೂಕುಗಳಲ್ಲಿ ಹೊಸ ಘಟಕ ಸ್ಥಾಪನೆ ಮಾಡಲು ಯೋಜಿಸಲಾಗಿದೆ. ಸದರಿ ಘಟಕಗಳು ಸಹ ತುಮಕೂರು ವಿಭಾಗದ ವ್ಯಾಪ್ತಿಗೆ ಬರುತ್ತವೆ. ತುಮಕೂರು ವಿಭಾಗದ ಮೇಲಿನ ಹೊರೆಯನ್ನು ಕಡಿಮೆ ಮಾಡಲು, ಘಟಕ, ವಿಭಾಗಗಳ ಮೇಲೆ ಇರುವ ಕಾರ್ಯ ಒತ್ತಡ ಕಡಿಮೆ ಮಾಡಲು ಮತ್ತು ಆಡಳಿತದ ಹಿತದೃಷ್ಟಿಯಿಂದ ತುಮಕೂರು ವಿಭಾಗವನ್ನು ವಿಭಜಿಸಿ, ತುಮಕೂರು ವಿಭಾಗದ ಮಧುಗಿರಿ, ಕೊರಟಗೆರೆ, ಶಿರಾ ಹಾಗೂ ಚಿತ್ರದುರ್ಗ ವಿಭಾಗದ ಪಾವಗಡ ಘಟಕವನ್ನು ಸೇರಿಸಿ ಮಧುಗಿರಿ ವಿಭಾಗ ಪ್ರಾರಂಭಿಸಲು ನಿಗಮದ ನಿರ್ದೇಶಕ ಮಂಡಳಿ 2026 ಫೆ. 7 ರಂದು ಅನುಮೋದನೆ ನೀಡಿದೆ.



**ಮೊದಲೇ ಸ್ಥಳ ನಿಗದಿ :** ಮುಂದಿನ ದಿನಗಳಲ್ಲಿ ಕೆ.ಎಸ್.ಆರ್.ಟಿ.ಸಿ ವಿಭಾಗೀಯ ಕಚೇರಿಯನ್ನು ಮಧುಗಿರಿಯಲ್ಲಿ ಪ್ರಾರಂಭಿಸುವ ಬಗ್ಗೆ ಮುಂದಾಲೋಚನೆ ಹೊಂದಿದ್ದ ಶಾಸಕ ಕೆ.ಎನ್. ರಾಜಣ್ಣನವರು ಈ ಹಿಂದೆಯೇ ಕಸಬಾ ವ್ಯಾಪ್ತಿಯ ಬಸವನಹಳ್ಳಿ ಬಳಿ ಕೆ.ಎಸ್.ಆರ್.ಟಿ.ಸಿ ಡಿಪೋಗೆ ಸ್ಥಳ ಮಂಜೂರು ಮಾಡುವ ಸಂದರ್ಭದಲ್ಲಿ ಡಿಪೋ ಪಕ್ಕದಲ್ಲೇ ಕೆ.ಎಸ್.ಆರ್.ಟಿಸಿ ವಿಭಾಗೀಯ ಕಚೇರಿಗೂ ಸ್ಥಳ ನಿಗದಿಗೊಳಿಸಿದ್ದರು. ಶೀಘ್ರದಲ್ಲೇ ಈ ಸ್ಥಳದಲ್ಲಿ ನೂತನ ಕೆ.ಎಸ್.ಆರ್.ಟಿ.ಸಿ ವಿಭಾಗೀಯ ಕಚೇರಿ ತಲೆ ಎತ್ತಲಿದೆ. ಕೆ.ಎಸ್.ಆರ್.ಟಿ.ಸಿ ಎಂಡಿ ಅಕ್ರಂಪಾಷ ರವರು ಈಗಾಗಲೇ ಸ್ಥಳ ಪರಿಶೀಲನೆ ನಡೆಸಿದ್ದಾರೆ. ಈಗ ತಾತ್ಕಾಲಿಕ ಕಟ್ಟಡದಲ್ಲಿ ಕಚೇರಿ ಕಾರ್ಯನಿರ್ವಹಿಸಲಿದ್ದು, ಮೊದಲ ಹಂತದಲ್ಲಿ 35 ಕ್ಕೂ ಹೆಚ್ಚು ಅಧಿಕಾರಿಗಳು, 250 ಕ್ಕೂ ಹೆಚ್ಚು ಸಾರಿಗೆ ಬಸ್ ಸೌಕರ್ಯ ಮತ್ತು 850 ಕ್ಕೂ ಹೆಚ್ಚು ಸಿಬ್ಬಂದಿ ಈ ವ್ಯಾಪ್ತಿಯಲ್ಲಿ ಕರ್ತವ್ಯ ನಿರ್ವಹಿಸಲಿದ್ದು, ಹಂತ ಹಂತವಾಗಿ ಸಿಬ್ಬಂದಿಗಳ ಸಂಖ್ಯೆಯಲ್ಲಿ ಏರಿಕೆಯಾಗಲಿದೆ.



**ಒಂಟೂವ ತಾಲೂಕು ಸೇರ್ಪಡೆ :** ನೂತನ ಮಧುಗಿರಿ ವಿಭಾಗವನ್ನು 2026 ಜೂ. 01 ರಿಂದ ಜಾರಿಗೆ ಬರುವಂತೆ ಪ್ರಾರಂಭಿಸಲು ಯೋಜಿಸಲಾಗಿದೆ. ತುಮಕೂರು ವಿಭಾಗದ ಮಧುಗಿರಿ ಮತ್ತು ಶಿರಾ ಘಟಕಗಳು ಮತ್ತು ಚಿತ್ರದುರ್ಗ ವಿಭಾಗದ ಪಾವಗಡ ಘಟಕವನ್ನು ಮಧುಗಿರಿ ವಿಭಾಗಕ್ಕೆ ವರ್ಗಾಯಿಸಲಾಗುವುದು. ಹೊಸದಾಗಿ ಪ್ರಾರಂಭಿಸಲು ಯೋಜಿಸಿರುವ ಕೊರಟಗೆರೆ ಘಟಕವನ್ನು ಮಧುಗಿರಿ ವಿಭಾಗದಿಂದ ಪ್ರಾರಂಭಿಸುವುದು. ಮಧುಗಿರಿಯಲ್ಲಿ ವಿಭಾಗೀಯ ಕಛೇರಿ ಸ್ಥಾಪಿಸಲು ಅವಶ್ಯ ಕಟ್ಟಡದ ವ್ಯವಸ್ಥೆ, ವಿಭಾಗೀಯ ಕಾರ್ಯಾಗಾರ ಪ್ರಾರಂಭಿಸಲು ಈ ಹಿಂದೆಯೇ ಸ್ಥಳ ಗುರುತಿಸಲಾಗಿದ್ದು, ಮಧುಗಿರಿ ವಿಭಾಗ ಪ್ರಾರಂಭಕ್ಕೆ ಅಗತ್ಯವಿರುವ ವಿಧಿ–ವಿಧಾನಗಳನ್ನು ಕೈಗೊಳ್ಳಲು, ಅಧಿಕಾರಿಗಳು, ಸಿಬ್ಬಂದಿಗಳ ಮಂಜೂರಾತಿ ಆದೇಶ, ನಿಯೋಜನೆ, ವರ್ಗಾವಣೆ, ಸ್ಥಿರಾಸ್ತಿ, ಚರಾಸ್ತಿ ವರ್ಗಾವಣೆ, ಅನುಸೂಚಿಗಳ ಪರಿಷ್ಕರಣೆ, ಕಡತಗಳ ವರ್ಗಾವಣೆ, ಸಲಕರಣೆಗಳು, ಪಿಠೋಪಕರಣಗಳು, ಗಣಕಯಂತ್ರ, ವಾಹನಗಳು ಇನ್ನಿತರೆ ಎಲ್ಲಾ ಆಗತ್ಯತೆಗಳನ್ನು ಪೂರೈಸಲು ಸಂಬಂಧಿಸಿದ ಇಲಾಖಾ ಮುಖ್ಯಸ್ಥರು ಆಗತ್ಯ ಕ್ರಮ ಕೈಗೊಂಡಿದ್ದಾರೆ.

**ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣವೂ ಮೇಲ್ದರ್ಜೆಗೆ :** ಕೆ.ಎಸ್.ಆರ್.ಟಿ.ಸಿ ಎಂಡಿ ಅಕ್ರಂಪಾಷರವರು ಕೆಲ ದಿನಗಳ ಹಿಂದೆ ವಿಭಾಗೀಯ ಕಚೇರಿಗೆ ಸ್ಥಳ ಪರಿಶೀಲನೆಗೆ ಆಗಮಿಸಿದ್ದ ಸಂದರ್ಭದಲ್ಲಿ ಪಟ್ಟಣದ ಕೆ.ಎಸ್.ಆರ್.ಟಿ.ಸಿ ಬಸ್ ನಿಲ್ದಾಣವನ್ನೂ ಪರಿಶೀಲನೆ ನಡೆಸಿದ್ದು, ಈ ಬಸ್ ನಿಲ್ದಾಣವು ಬಹಳಷ್ಟು ಕಿರಿದಾಗಿದ್ದು, ನಿಲ್ದಾಣವನ್ನು ಹೈಟೆಕ್ ಮಾದರಿಯಲ್ಲಿ ಮೇಲ್ದರ್ಜೆಗೇರಿಸಲು ಪ್ರಸ್ತಾವನೆ ಸಲ್ಲಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ ಎನ್ನಲಾಗಿದೆ.

(((((ಶಾಸಕ ಕೆ.ಎನ್. ರಾಜಣ್ಣನವರು ಈ ಹಿಂದೆ ಕೆ.ಎಸ್.ಆರ್.ಟಿ.ಸಿ ಡಿಪೋಗೆ ಸ್ಥಳ ನಿಗದಿಗೊಳಿಸಿದ್ದ ಸಂದರ್ಭದಲ್ಲೇ ವಿಭಾಗೀಯ ಕಚೇರಿಗೂ ಸ್ಥಳ ಮೀಸಲಿರಿಸಿದ್ದರು. ಇದು ರಾಜಣ್ಣನವರು ಈ ಹಿಂದೆಯೇ ಮಧುಗಿರಿಗೆ ವಿಭಾಗೀಯ ಕಚೇರಿ ತರಬೇಕು ಎಂದು ಆಲೋಚನೆ ಮಾಡಿದ್ದರು ಎಂಬುದನ್ನು ತೋರಿಸುತ್ತದೆ. ಅವರ ಯೋಜನೆಯಂತೆ ಮಧುಗಿರಿಗೆ ವಿಭಾಗೀಯ ಕಚೇರಿ ಮಂಜೂರು ಮಾಡಿಸಿದ್ದಾರೆ. –

ಬಿ. ನಾಗೇಶ್ ಬಾಬು, ಡಿಸಿಸಿ ಬ್ಯಾಂಕ್ ನಿರ್ದೇಶಕ.)))

ಪ್ರೀತಿಯ ನೆಚ್ಚಿನ ಓದುಗ ಮಿತ್ರರೇ ಸೂರ್ಯಪ್ರಗತಿ ಕನ್ನಡ ದಿನಪತ್ರಿಕೆಯ ಸುದ್ದಿಗಳನ್ನ ಅಂತರ್ಜಾಲ ತಾಣ ವೆಬ್ ಆವೃತ್ತಿ https://suryapragathi.c om ನಲ್ಲಿ ಹಾಗೂ https://epaper.suryapragathi.com ನಲ್ಲಿ ಓದಬಹುದು – ನೋಡಬಹುದು ಹೆಚ್ಚಿನ ಮಾಹಿತಿಗಾಗಿ 9901010109

# ಆರೋಗ್ಯ ತಪಾಸಣೆ, ರಕ್ತದಾನ ಹಾಗೂ ಅಂಗಾಂಗ ದಾನ ನೋಂದಣಿ ಶಿಬಿರ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿಗಳ ಸಹಯೋಗದಲ್ಲಿ ಆರೋಗ್ಯ ತಪಾಸಣಾ ಶಿಬಿರ, ರಕ್ತದಾನ ಶಿಬಿರ ಹಾಗೂ ಅಂಗಾಂಗ ದಾನ ಶಿಬಿರವನ್ನು ನಗರದ ತಾಲ್ಲೂಕು ಪಂಚಾಯಿತಿ ಆವರಣದಲ್ಲಿ ಆಯೋಜಿಸಲಾಯಿತು.

ರಕ್ತದಾನವು ಅತಿ ಶ್ರೇಷ್ಠದಾನವಾಗಿದ್ದು ಒಬ್ಬರ ಜೀವವನ್ನು ಉಳಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತದೆ. ಪ್ರತಿಯೊಬ್ಬರು ತಮ್ಮ ಸಾಮಾಜಿಕ ಹೊಣೆ ಹಾಗೂ ಸಮಾಜದ ಕುರಿತು ಕಾಳಜಿಯನ್ನು ಹೊಂದುವುದರ ಮೂಲಕ ರಕ್ತದಾನವನ್ನು ಮಾಡಿ ಎಂದು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ (ಅಭಿವೃದ್ಧಿ) ಸಂಜೀವಪ್ಪ ರವರು ತಾಲ್ಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿಗಳ ಸಹಯೋಗದಲ್ಲಿ ಆಯೋಜಿಸಲಾಗಿದ್ದ ರಕ್ತದಾನ ಶಿಬಿರ ಹಾಗೂ ಉಚಿತ ಆರೋಗ್ಯ ತಪಾಸಣಾ ಶಿಬಿರದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ನಂತರ, ಕಾರ್ಯಕ್ರಮದಲ್ಲಿ ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಲಕ್ಷ್ಮೀನಾರಾಯಣ ಸ್ವಾಮಿ ರವರು ಮಾತನಾಡಿ, ರಕ್ತದಾನವು ಮಾನವೀಯ ಸೇವೆಯ ಮಹತ್ವದ ಕಾರ್ಯವಾಗಿದ್ದು ಇಂತಹ ಶಿಬಿರಗಳು ಸಮಾಜಕ್ಕೆ ಬಹಳ ಉಪಯುಕ್ತ, ಮನುಷ್ಯನಿಗೆ ಆರೋಗ್ಯವೇ ಸಂಪತ್ತಾಗಿರಬೇಕು ಆದ ಕಾರಣ ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿಯನ್ನು ಎಲ್ಲಾ ವಯಸ್ಸಿನವರು ಕೂಡ ಕಂಡುಕೊಳ್ಳಬೇಕು ಈ ನಿಟ್ಟಿನಲ್ಲಿ ತಾಲೂಕು ಪಂಚಾಯಿತಿ ಹಾಗೂ ಗ್ರಾಮ ಪಂಚಾಯಿತಿಗಳ ಸಹಯೋಗದಲ್ಲಿ ರಕ್ತದಾನ ಶಿಬಿರವನ್ನು ಆಯೋಜಿಸಿರುವುದು ಬಹಳ ಸಂತೋಷದ ವಿಷಯ ಎಂದು ಅವರು ಅಭಿಪ್ರಾಯ ವ್ಯಕ್ತಪಡಿಸಿದರು.



ರಕ್ತದಾನ ಹಾಗೂ ಆರೋಗ್ಯ ತಪಾಸಣಾ ಶಿಬಿರ ಮತ್ತು ಅಂಗಾಂಗ ದಾನ ನೋಂದಣಿ ಶಿಬಿರವು ಯಶಸ್ವಿಯಾಗಿ ಜರುಗಿತು.ತಾಲ್ಲೂಕು ಹಾಗೂ ಗ್ರಾಮ ಪಂಚಾಯಿತಿಯ 80 ಸಿಬ್ಬಂದಿಗಳು ಅತಿ ಉತ್ಸಾಹದಿಂದ ರಕ್ತದಾನವನ್ನು ಮಾಡಿದರು 250 ಕ್ಕೂ ಅಧಿಕ ಸಿಬ್ಬಂದಿಗಳು ಆರೋಗ್ಯ ತಪಾಸಣಾ ಶಿಬಿರದಲ್ಲಿ ಪಾಲ್ಗೊಂಡು ಆರೋಗ್ಯ ತಪಾಸಣೆಯನ್ನು ಮಾಡಿಸಿದರು. ಜೊತೆಗೆ ವೈದ್ಯರಿಂದ ಸಾಮಾನ್ಯ ಆರೋಗ್ಯ, ಕಣ್ಣು ಮತ್ತು ದಂತ ತಪಾಸಣೆ ಸೇರಿದಂತೆ ವಿವಿಧ ಆರೋಗ್ಯ ಸೇವೆಗಳನ್ನು ಪಡೆದುಕೊಂಡರು.

# ಕಾನೂನು ಬದ್ಧವಾಗಿ ಬಕ್ರೀದ್ ಹಬ್ಬ ಆಚರಿಸಿ ಶಾಂತಿ ಸಭೆಯಲ್ಲಿ ಡಿ. ವೈ. ಎಸ್.ಪಿ. ಮಂಜುನಾಥ್

ಸೂರ್ಯಪ್ರಗತಿನ್ಯೂಸ್.ಕಾಂ

ಮಧುಗಿರಿ: ಅಹಿತಕರ ಘಟನೆ ನಡೆಯದಂತೆ ಕಾನೂನು ಬದ್ಧವಾಗಿ ಬಕ್ರೀದ್ ಹಬ್ಬ ಆಚರಿಸಬೇಕೆಂದು ಮಧುಗಿರಿ ಡಿವೈಎಸ್ಪಿ ಮಂಜುನಾಥ್ ತಿಳಿಸಿದರು.ಪಟ್ಟಣದ ನಕುಲ್ ಪಾರ್ಟಿ ಹಾಲ್ನಲ್ಲಿ ಸೋಮವಾರ ಪೊಲೀಸ್ ಇಲಾಖೆಯಿಂದ ಹಮ್ಮಿಕೊಂಡಿದ್ದ ಉಪವಿಭಾಗ ಮಟ್ಟದ ಬಕ್ರೀದ್ ಹಬ್ಬದ ಶಾಂತಿ ಸಭೆಯಲ್ಲಿ ಮಾತನಾಡಿದ ಅವರು,ಮುಸಲ್ಮಾನ್ ಬಾಂಧವರಿಗೆ ಬಕ್ರೀದ್ ಪವಿತ್ರ ಹಬ್ಬವಾಗಿದ್ದು ಯಾವುದೇ ಅಹಿತಕರ ಘಟನೆ ನಡೆಯದಂತೆ ಹಬ್ಬದ ದಿನದಂದು ನಮಾಜ್ ಪ್ರಾರ್ಥನೆ ನಂತರ ಕಾನೂನು ಬದ್ಧವಾಗಿ ಪ್ರಾಣಿ ಬಳಿ ಕೊಡಬೇಕು,

**ಮಾಂಸದ ತ್ಯಾಜ್ಯಗಳನ್ನು ಎಲ್ಲೆಂದರಲ್ಲಿ ಬಿಸಾಡದೆ**

ಶಿಸ್ತು ಕಾಪಾಡಿಕೊಳ್ಳಬೇಕು, ಹಬ್ಬದ ಪ್ರಯುಕ್ತ ತಾಲೂಕಿನ 4 ದಿಕ್ಕಿನಲ್ಲೂ ಚೆಕ್ಪೋಸ್ಟ್ ಹಾಕಲಾಗುವುದು ಯಾವುದೇ ಅಹಿತಕರ ಘಟನೆಗೆ ಆಸ್ಪದ ನೀಡದೆ ಶಾಂತಿಯುತವಾಗಿ ಹಬ್ಬವನ್ನು ಆಚರಿಸಬೇಕೆಂದು ತಿಳಿಸಿದರು.ಹಿಂದಿನಿಂದಲೂ ಮಧುಗಿರಿ ಶಾಂತಿಯುತೆಗೆ ಹೆಸರುವಾಸಿ ಯಾವುದೇ ಅಹಿತಕರ ಘಟನೆ ಸಂಭವಿಸದಂತೆ ಪೊಲೀಸ್ ಇಲಾಖೆ ಶಾಂತಿ ಕಾಪಾಡಿಕೊಂಡು ಬಂದಿದೆ,ಏನೇ ಸಣ್ಣ ಪುಟ್ಟ ಸಮಸ್ಯೆ ಆಗಿದ್ದಲ್ಲಿ ತಮ್ಮಲ್ಲೇ ಶಾಂತಿಯುತವಾಗಿ ಬಗೆಹರಿಸಿಕೊಳ್ಳಿ, ಪೊಲೀಸ್ ಇಲಾಖೆ ಸನ್ಮಿತ್ರ ಕಾರ್ಯಕ್ರಮ ಮೂಲಕ ಮಾದಕ ದ್ರವ್ಯ ವ್ಯಸನದ ಪಿಡುಗನ್ನು ತಡೆಗಟ್ಟಲು ಮತ್ತು ಯುವಕರನ್ನು ದುಶ್ಚಟದಿಂದ ಮುಕ್ತಗೊಳಿಸುವ ಕೆಲಸ ಮಾಡುತ್ತಿದೆ,ಸಮಾಜದ ಎಲ್ಲಾ ಸಮುದಾಯದವರು ಸಹ ತಮ್ಮ ಪ್ರಾರ್ಥಣ ಮಂದಿರಗಳಲ್ಲಿ ಡ್ರಗ್ಸ್ ಮತ್ತು ಮದ್ಯದ ಹಾವಳಿಯನ್ನು ತಡೆಗಟ್ಟಲು ಜಾಗೃತಿ ಮೂಡಿಸಬೇಕೆಂದು ತಿಳಿಸಿದರು.

ಸಿಪಿಐ ಹನುಮಂತರಾಯಪ್ಪ ಮಾತನಾಡಿ ಹಬ್ಬದ ನಂತರ ಜನರು ಪ್ರವಾಸ ಕೈಗೊಳ್ಳುವುದು ಸಹಜ ಅನಿರೀಕ್ಷಿತ ಘಟನೆಗಳು ಸಂಭವಿಸದಂತೆ ಎಚ್ಚರಿಕೆ ಕಾಪಾಡಿಕೊಳ್ಳಬೇಕು,ಯುವಕರು ಬೈಕ್ ವ್ಹೀಲಿಂಗ್ ಹಾಗೂ ಅಪಾಯಕಾರಿ ಸಾಹಸಗಳನ್ನು ಮಾಡದಂತೆ ನಮಾಜ್ ಪ್ರಾರ್ಥನೆ ವೇಳೆ ಜಾಗೃತಿ ಮೂಡಿಸಬೇಕೆಂದು ಹೇಳಿದರು.

ಮಧುಗಿರಿ ಆರಕ್ಷಕ ಠಾಣೆ ಎಚಂದ್ರಶೇಖರ್ ಮಾತನಾಡಿ ತ್ಯಾಗ ಮತ್ತು ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಯಾವುದೇ ಅಹಿತಕರ ಘಟನೆಗಳು ನಡೆಯದಂತೆ, ಸರಕಾರದ ನಿಯಮಗಳನ್ನು ಪಾಲನೆ ಮಾಡಿ ಶಾಂತಿಯುತವಾಗಿ ಆಚರಿಸಬೇಕೆಂದು ತಿಳಿಸಿದರು.

ಮಂಜುನಾಥ್, ಡಿ. ವೈ. ಎಸ್. ಪಿ ಮಧುಗಿರಿ

ಈ ಸಂದರ್ಭದಲ್ಲಿ ಕೊಡಿಗೇನಹಳ್ಳಿ ಎಸ್ ಐ ರಾಜೇಶ್, ಮಿಡಿಗೇಶಿ ಎಸ್ ಐ ರವೀಂದ್ರ, ಪೊಲೀಸ್ ಸಿಬ್ಬಂದಿಗಳಾದ ಮಲ್ಲಿಕಾರ್ಜುನ್, ನಟರಾಜ್ ಹಾಗೂ ಇತರರು ಹಾಜರಿದ್ದರು.

# ತ್ಯಾಗದ ಪ್ರತೀಕವಾದ ಮಾತೃಶ್ರೀ ರಮಾಬಾಯಿ ಭೀಮರಾವ್ ಅಂಬೇಡ್ಕರ್ ಅವರ 91ನೇ ವರ್ಷದ ಪುಣ್ಯತಿಥಿ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು : ಭಾರತದ ಇತಿಹಾಸ ಕಂಡ ಅಪ್ರತಿಮ ಮಹಿಳೆ, ತ್ಯಾಗದ ಪ್ರತೀಕವಾದ ಮಾತೃಶ್ರೀ ರಮಾಬಾಯಿ ಭೀಮರಾವ್ ಅಂಬೇಡ್ಕರ್ ಅವರ 91ನೇ ವರ್ಷದ ಪುಣ್ಯತಿಥಿಯನ್ನು ಅಖಿಲ ಭಾರತ ಡಾ. ಅಂಬೇಡ್ಕರ ಪ್ರಚಾರ ಸಮಿತಿ ಹಾಗೂ ಅಖಿಲ ಭಾರತ ದಲಿತ ಕ್ರಿಯಾ ಸಮಿತಿಯ ವತಿಯಿಂದ ಇಂದು ತುಮಕೂರು ಜಿಲ್ಲಾ ಕೇಂದ್ರ ಕಛೇರಿಯಲ್ಲಿ ಸರಳವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಅಖಿಲ ಭಾರತ ಡಾ. ಅಂಬೇಡ್ಕರ ಪ್ರಚಾರ ಸಮಿತಿ ಹಾಗೂ ಅಖಿಲ ಭಾರತ ದಲಿತ ಕ್ರಿಯಾ ಸಮಿತಿಯ ಜಿಲ್ಲಾಧ್ಯಕ್ಷರಾದ ಎನ್.ಕೆ.ನಿಧಿಕುಮಾರ್ ಮಾತನಾಡುತ್ತಾ ಯುಗದನಾಯಕ ಡಾ. ಬಿ.ಆರ್. ಅಂಬೇಡ್ಕರ್ ಅವರ ಮಹೋನ್ನತ ಸಾಧನೆಗಳ ಹಿಂದೆ ಮತ್ತು ಅವರ ಯಶಸ್ಸಿನ ಪ್ರತಿಯೊಂದು ಹೆಜ್ಜೆಯಲ್ಲೂ ದೃಢವಾಗಿ ನಿಂತ ದಿವ್ಯ ಶಕ್ತಿ ರಮಾಬಾಯಿ ಅವರಾಗಿದ್ದರು. ಬಾಬಾಸಾಹೇಬರು ಲಂಡನ್ ಮತ್ತು ಅಮೆರಿಕಾಗಳಲ್ಲಿ ಉನ್ನತ ಶಿಕ್ಷಣವನ್ನು ಮುಂದುವರಿಸಲು ಹಾಗೂ ಅವರ ನಿಜವಾದ ಸಾಮರ್ಥ್ಯವನ್ನು ಜಗತ್ತಿಗೆ ತೋರ್ಪಡಿಸಲು ರಮಾಬಾಯಿಯವರ ನಿರಂತರ ಬೆಂಬಲ ಮತ್ತು ಅಚಲವಾದ ವಿಶ್ವಾಸವೇ ಪ್ರಮುಖ ಕಾರಣವಾಗಿತ್ತು. ಕಡುಬಡತನ ಮತ್ತು ವೈಯಕ್ತಿಕ ಜೀವನದ ಸಾಲು ಸಾಲು ಕಷ್ಟಗಳ ನಡುವೆಯೂ ಅವರು ಎಂದಿಗೂ ಬಾಬಾಸಾಹೇಬರು ಧೃತಿಗೆಡದಂತೆ ನೋಡಿಕೊಂಡ ಮಹಾತಾಯಿ ಅವರಾಗಿದ್ದರು ಎಂದರಲ್ಲದೇ ಅವರಿಗೆ ಜೀವನದ ಕೊನೆಯುಸಿರಿನವರೆಗೂ ಬದುಕಿನಲ್ಲಿ ಎದುರಾದ ಕಷ್ಟಗಳನ್ನು ನುಂಗಿ ಪತಿಗೆ ಪ್ರೋತ್ಸಾಹ ನೀಡಿದ ರಮಾಬಾಯಿ ಮಹಾನ್ ಮಾತೆ. ಬದುಕಿನಲ್ಲಿ ಕಷ್ಟವೆನ್ನುವುದು ಆಕೆಗೆ ಹೊಸತೇನಲ್ಲ. ಬಾಲ್ಯದಿಂದಲೇ ಕಷ್ಟಗಳು ಆಕೆಯ ಸುತ್ತಲೂ ಸುತ್ತಿಕೊಂಡಿದ್ದವು. ಅವುಗಳ ಮಧ್ಯದಲ್ಲಿದ್ದುಕೊಂಡೇ ಬದುಕು ಸವೆಸಿದ ರಮಾಬಾಯಿ, ಅಂಬೇಡ್ಕರ್ ಅವರಿಗೆ ಮಡದಿಯಷ್ಟೇ ಅಲ್ಲ ಮಾತೆಯೂ ಆಗಿದ್ದಳೆಂದರೆ ತಪ್ಪಾಗಲಾರದು ಎಂದು ಭಾವುಕರಾಗಿ ನುಡಿದರು.



ನಂತರ ಅಖಿಲ ಭಾರತ ದಲಿತ ಕ್ರಿಯಾ ಸಮಿತಿಯ ಜಿಲ್ಲಾ ಉಪಾಧ್ಯಕ್ಷರಾದ ಲಕ್ಷ್ಮೀನಾರಾಯಣ ಎಸ್ ರವರು ಮಾತನಾಡುತ್ತಾ ತಮ್ಮ ಇಡೀ ಜೀವನವನ್ನು ಸಮಾಜದ ಏಳಿಗೆಗಾಗಿ ಮುಡುಪಾಗಿಟ್ಟ ರಮಾಬಾಯಿ ಅವರು ಕೇವಲ ಬಾಬಾಸಾಹೇಬರ ಪತ್ನಿಯಾಗಿ ಮಾತ್ರವಲ್ಲದೆ, ಸೌಲಭ್ಯಗಳ ವಂಚಿತರ, ಶೋಷಿತರ ಮತ್ತು ದೀನದಲಿತರ ಪಾಲಿನ ಹೆಮ್ಮೆಯ ಮಾತೃಶ್ರೀಯಾಗಿ ಹೊರಹೊಮ್ಮಿದಂತಹವರು. ಬಾಬಾಸಾಹೇಬರು ಸಮಾಜದ ಉದ್ಧಾರಕ್ಕಾಗಿ ಮತ್ತು ಭಾರತಕ್ಕೆ ಜಾಗತಿಕ ಮಟ್ಟದಲ್ಲಿ ಕೀರ್ತಿ ತರಲು ಹಗಲಿರುಳು ಶ್ರಮಿಸುತ್ತಿದ್ದಾಗ, ರಮಾಬಾಯಿಯವರು ಮನೆಯ ಜವಾಬ್ದಾರಿಯನ್ನು ಹೊತ್ತುಕೊಂಡು ಅವರಿಗೆಸಂಪೂರ್ಣಸ್ವಾತಂತ್ರ್ಯವನ್ನು ನೀಡಿದ ಮಹಾನ್ಮಾತೆ ಎಂದು ತಿಳಿಸಿದರು.

ಅಖಿಲ ಭಾರತ ದಲಿತ ಕ್ರಿಯಾ ಸಮಿತಿಯ ಕಾನೂನು ಘಟಕದ ಜಿಲ್ಲಾಧ್ಯಕ್ಷರಾದ ವಸಂತ್ ಕುಮಾರ್ ರವರು ಮಾತನಾಡುತ್ತಾ ನಮ್ರತೆ, ಸಹನೆ ಮತ್ತು ಕರುಣೆಯ ಸಾಕಾರ ಮೂರ್ತಿಯಾಗಿದ್ದ ತಾಯಿ ರಮಾಬಾಯಿ ಅಂಬೇಡ್ಕರ್ ಅವರ ತ್ಯಾಗದ ಬದುಕು ದೇಶದ ಇತಿಹಾಸದಲ್ಲಿ ಸುವರ್ಣಾಕ್ಷರಗಳಲ್ಲಿ ಬರೆಯಲ್ಪಟ್ಟಿದೆ. ಈ ಪುಣ್ಯದಿನದಂದು ಆ ಮಹಾನ್ ಚೇತನಕ್ಕೆ ಇಡೀ ದೇಶವು ಭಕ್ತಿಪೂರ್ವಕ ಹಾಗೂ ಗೌರವಪೂರ್ವಕ ನಮನಗಳನ್ನು ಸಲ್ಲಿಸಲಾಗುತ್ತಿದೆ, ಅಂತೆಯೇ ನಾವು ಸಹ ಅವರ ವಿಚಾರಧಾರೆಗಳನ್ನು ನಮ್ಮ ಸಂಘದ ಸನ್ಮಿತ್ರರೊಂದಿಗೆ ಹಂಚಿಕೊಳ್ಳುತ್ತಾ ನಮ್ಮ ದೇಶದ ಪ್ರತಿಯೊಬ್ಬರೂ ಸಹ ತ್ಯಾಗಮಯಿಯವರ ಆದರ್ಶಗಳನ್ನು ಪಾಲಿಸುವಂತಗಾಲಿ ಎಂಬ ಸದುದ್ದೇಶವನ್ನು ಹೊಂದಿದ್ದೇವೆಂದರು.ಕಾರ್ಯಕ್ರಮದಲ್ಲಿ ಎನ್.ಕೆ.ನಿಧಿಕುಮಾರ್, ಎಸ್.ಲಕ್ಷ್ಮೀನಾರಾಯಣ, ವಸಂತ್ ಕುಮಾರ್, ಗೂಳೂರು ರಾಜಣ್ಣ, ಗಂಗಾಧರ್ ಜಿ.ಆರ್, ರಂಜನ್, ದರ್ಶನ್, ಸಿದ್ಧಲಿಂಗಯ್ಯ, ರಂಗಸ್ವಾಮಯ್ಯ, ದೇವರಾಜ್, ತ್ಯಾಗರಾಜು, ಎನ್. ರವಿಕುಮಾರ್ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಹಿಂದುತ್ವವಾದಿ, ಕೃಷ್ಣ ಶಾನುಭೋಗ ನಿಧಾನ

ತುಮಕೂರು ಕ್ಯಾತಸಂದ್ರದ ನಿವಾಸಿ ಉತ್ತಮ ಸಂಘಟಕ, ಹಿಂದುತ್ವವಾದಿ ಹಾಗೂ ಭಗತ್ ಸೇನೆಯ ರಾಜ್ಯ ಅಧ್ಯಕ್ಷರಾದ ಕೃಷ್ಣ ಶಾನುಭೋಗ 48ವರ್ಷ ಮಂಗಳೂರಿನ ಸೇಂಟ್ ಮಿಲ್ಲರ್ ಆಸ್ಪತ್ರೆಯಲ್ಲಿ ನಿಧನರಾದರು. ವೃತರು ಕೆಲವು ವರ್ಷಗಳಿಂದ ಅನಾರೋಗ್ಯದ ಸಮಸ್ಯೆಯಿಂದ ಬಳಲುತ್ತಿದ್ದರು ಅವರು ಕೆಲವು ದಿನಗಳಿಂದ ಕುಟುಂಬದೊಂದಿಗೆ ಧಾರ್ಮಿಕ ಪ್ರವಾಸದಲ್ಲಿದ್ದ ಸಂದರ್ಭದಲ್ಲಿ ಹಠತ್ ಆರೋಗ್ಯದಲ್ಲಿ ಏರುಪೇರು ಆದಕಾರಣ ಅವರನ್ನ ಮಂಗಳೂರಿನ ಸೆಂಟ್ ಮಿಲ್ಲರ್ ಆಸ್ಪತ್ರೆಗೆ ಸೇರಿಸಲಾಗಿತ್ತು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟರು.

ಮೃತರಿಗೆ ಅವರ ತಾಯಿ, ಪತ್ನಿ ವಕೀಲರಾದ ಭವ್ಯ ಕೃಷ್ಣಶಾನುಭೋಗ ಇಬ್ಬರು ಸುಪುತ್ರರನ್ನ ಸೇರಿದಂತೆ ಅಪಾರ ಬಂಧು–ಬಳಗ ಹಾಗೂ ಸ್ನೇಹಿತರನ್ನ ಅಗಲಿದ್ದಾರೆ.

ಚಿತಗಾರದಲ್ಲಿ ಅಗ್ನಿ ಸ್ಪರ್ಶದೊಂದಿಗೆ ಅಂತ್ಯಕ್ರಿಯೆ ಇಂದು ನಡೆಯಿತು ಸಂಘಟನಾಕಾರ ಹಾಗೂ ಹಿಂದುತ್ವವಾದಿ ಕೃಷ್ಣ ಶಾನುಭೋಗ ರವರ ಅಂತ್ಯಕ್ರಿಯೆಯು ತುಮಕೂರಿನ ಗಾರ್ಡನ್ ರಸ್ತೆಯಲ್ಲಿರುವ ಸಾರ್ವಜನಿಕ ಚಿತಗಾರದಲ್ಲಿ ಬ್ರಾಹ್ಮಣರ ಶಾನುಭೋಗರ ಸಾಂಪ್ರದಾಯದಂತೆ ಧಾರ್ಮಿಕ ವಿಧಿ ವಿಧಾನಗಳಲ್ಲಿ ಅಗ್ನಿ ಸ್ಪರ್ಶ ಮಾಡಿ ನೆರವೇರಿಸಲಾಯಿತು ಎಂದು ಕುಟುಂಬದವರು ತಿಳಿಸಿದರು

# ಜೂ. 5ರಂದು ಚಿತ್ರಕಲಾ ಸ್ಪರ್ಧೆ

ತುಮಕೂರು: ವಿಶ್ವ ಪರಿಸರ ದಿನಾಚರಣೆ ಅಂಗವಾಗಿ ಜಿಲ್ಲಾ ಬಾಲಭವನ ಸಮಿತಿ ವತಿಯಿಂದ ಜೂನ್ 5ರಂದು ಬೆಳಿಗ್ಗೆ 11 ಗಂಟೆಗೆ ನಗರದ ಬಾಲಭವನದಲ್ಲಿ ಚಿತ್ರಕಲಾ ಸ್ಪರ್ಧೆಯನ್ನು ಏರ್ಪಡಿಸಲಾಗಿದೆ.

ಸ್ಪರ್ಧೆಯಲ್ಲಿ 5 ರಿಂದ 16 ವರ್ಷದೊಳಗಿನ ಮಕ್ಕಳು ಭಾಗವಹಿಸಬಹುದಾಗಿದ್ದು, ಮಕ್ಕಳ ಪೋಷಕರು ಜೂನ್ 3ರ ಸಂಜೆ 5 ಗಂಟೆಯೊಳಗೆ ಜಿಲ್ಲಾ ಬಾಲಭವನ ಕಚೇರಿ, ಮಹಾತ್ಮಗಾಂಧಿ ರಸ್ತೆ, ತುಮಕೂರು ಇಲ್ಲಿ ಹೆಸರನ್ನು ನೋಂದಾಯಿಸಿಕೊಳ್ಳಬಹುದಾಗಿದೆ.

ಕಿರಿಯ/ಹಿರಿಯ ಪ್ರಾಥಮಿಕ ಪಾಠಶಾಲೆಯಿಂದ 150 ಮಕ್ಕಳ ಮತ್ತು ಪ್ರೌಢಶಾಲಾ ವಿಭಾಗದಿಂದ 100 ಮಕ್ಕಳು ಒಟ್ಟು 250 ಮಕ್ಕಳಿಗೆ ಮಾತ್ರ ಭಾಗವಹಿಸಲು ಅವಕಾಶವಿದ್ದು, ಮೊದಲು ನೋಂದಾಯಿಸಿಕೊಂಡವರಿಗೆ ಮಾತ್ರ ಆದ್ಯತೆ ನೀಡಲಾಗುವುದು. ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 9901890079ನ್ನು ಸಂಪರ್ಕಿಸಬೇಕೆಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೂಕ ಪ್ರಾಣಿ ಪಕ್ಷಿಗಳಿಗೆ ಅತಿ ಸರಳವಾದ ನೀರಿನ ವ್ಯವಸ್ಥೆ

ಸೂರ್ಯಪ್ರಗತಿನ್ಯೂಸ್.ಕಾಂ



ಮಧುಗಿರಿ :–ಪ್ರಾಣಿ ಪಕ್ಷಿಗಳಿಗೆ ಹಾಗೂ ಮೂಕ ಪ್ರಾಣಿಗಳಿಗೆ ಕುಡಿಯುವ ನೀರಿಗಾಗಿ ಅತಿ ಸರಳವಾದ ವ್ಯವಸ್ಥೆಯನ್ನು ಮದುಗಿರಿ ಪಟ್ಟಣದ ಕೆ ಆರ್ ಬಡಾವಣೆಯ ನಿವಾಸಿಯೊಬ್ಬರು ಮಾಡಿದ್ದಾರೆ .

ಶ್ರೀ ಟಿವಿ ವಿ ಪ್ರಥಮ ದರ್ಜೆ ಕಾಲೇಜಿನ ಕನ್ನಡ ಉಪನ್ಯಾಸಕರು ಹಾಗೂ ಪ್ರಾಂಶುಪಾಲರಾಗಿದ್ದ ಪ್ರೊ. ಸಿ. ಕೃಷ್ಣಪ್ಪ ರವರ ಮನೆ ಮುಂಭಾಗ ಈ ವ್ಯವಸ್ಥೆಯನ್ನು ನೋಡಬಹುದಾಗಿದೆ.

ಒಡೆದು ಹೋದ ಮಡಿಕೆಯ ಮೇಲ್ಭಾಗವನ್ನು ಸಿಮೆಂಟ್ ಅನ್ನು ಮಾಡಿ ನೀರು ತುಂಬಿದವರನ್ನು ಕಾಣಬಹುದು ಈ ಭಾಗದಲ್ಲಿ ಪ್ರತಿನಿತ್ಯ ಕೋತಿಗಳು, ದನಗಳು, ಕುರಿಗಳು ಬಂದು ನೀರು ಕುಡಿಯುತ್ತವೆ.

ಬೇಸಿಗೆಕಾಲ ಮಳೆಗಾಲ ಮತ್ತು ಚಳಿಗಾಲದಲ್ಲಿ ನೀರು ಖಾಲಿಯಾದ ತಕ್ಷಣ ನೀರು ತುಂಬುವ ಮೂಲಕ ಇದನ್ನು ಕಾಯಕವನ್ನಾಗಿ ಮಾಡಿಕೊಂಡಿದ್ದಾರೆ. ಮೂಕ ಪ್ರಾಣಿಗಳಿಗೆ ಮಾನವೀಯತೆ ತೋರಿರುವ ಇವರ ಕಾರ್ಯಕ್ಕೆ ಜೈ ಎನ್ನುತ್ತಾರೆ ಜನ.

# ಊರುಕೆರೆಯಲ್ಲಿ ಬೇಸಿಗೆ ಶಿಬಿರ

ಊರುಕೆರೆಯಲ್ಲಿ ಆಯೋಜಿಸಲಾಗಿದ್ದ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭವು ಉತ್ಸಾಹಭರಿತವಾಗಿ ನಡೆಯಿತು. ಕಾರ್ಯಕ್ರಮವನ್ನು ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ರಂಜಿತಾರವರು, ಹರಿಣಿಯವರು, ಪ್ರಭಾಕರ್ ರವರು, ತಿಪ್ಪೇಸ್ವಾಮಿ ಯವರು ಹಾಗೂ ಅರಿವು ಕೇಂದ್ರದ ಸುಲೋಚನ ರವರು ಉದ್ಘಾಟಿಸಿದರು.

ಶಿಬಿರದಲ್ಲಿ ಭಾಗವಹಿಸಿದ್ದ ಮಕ್ಕಳು ವಿವಿಧ ಸಾಂಸ್ಕೃತಿಕ, ಸೃಜನಾತ್ಮಕ ಹಾಗೂ ಕ್ರೀಡಾ ಚಟುವಟಿಕೆಗಳಲ್ಲಿ ಉತ್ಸಾಹದಿಂದ ಪಾಲ್ಗೊಂಡು ತಮ್ಮ ಪ್ರತಿಭೆಯನ್ನು ಅನಾವರಣಗೊಳಿಸಿದರು. ಮಕ್ಕಳ ಪ್ರದರ್ಶನಕ್ಕೆ ಪೋಷಕರು ಹಾಗೂ ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮಸ್ಥರು, ಪೋಷಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಬೇಸಿಗೆ ಶಿಬಿರವು ಮಕ್ಕಳಲ್ಲಿ ಆತ್ಮವಿಶ್ವಾಸ, ಸಾಮೂಹಿಕತೆ ಮತ್ತು ಸೃಜನಾತ್ಮಕ ಚಿಂತನೆ ಬೆಳೆಸುವಲ್ಲಿ ಸಹಕಾರಿಯಾಗಿದೆ ಎಂದು ಮುಖ್ಯ ಅತಿಥಿಗಳು ಅಭಿಪ್ರಾಯಪಟ್ಟರು.

# ಬಾಲ ಕಾರ್ಮಿಕ ಮಕ್ಕಳ ನೇಮಕ ಸಂಸ್ಥೆಗಳ ತಪಾಸಣೆ ನಡೆಸಲು ಡಿ.ಸಿ. ಸೂಚನೆ

ತುಮಕೂರು; ಬಾಲ ಹಾಗೂ ಕಿಶೋರ ಕಾರ್ಮಿಕ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಂಡಿರುವ ಸಂಸ್ಥೆಗಳಿಗೆ ಪ್ರತಿ ಮಾಹೆ ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ನಡೆಸಿ, ಸಂಸ್ಥೆಗಳ ಮಾಲೀಕರ ವಿರುದ್ಧ ಕಾನೂನು ರೀತಿ ಕ್ರಮ ಕೈಗೊಂಡು ಮಾಹೆಯಾನ ವರದಿಯನ್ನು ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಗೆ ಸಲ್ಲಿಸಬೇಕೆಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಸೆಕ್ಷನ್–17ರಡಿ ನೇಮಕವಾಗಿರುವ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ ವತಿಯಿಂದ ಬುಧವಾರ ಗೂಗಲ್ ಮೀಟ್ ಮೂಲಕ ಕಾರ್ಯಕಾರಿ ಸಮಿತಿ ಹಾಗೂ ಜಿಲ್ಲಾ ಕಾರ್ಯಪಡೆ ಸಭೆ ನಡೆಸಿ ಮಾತನಾಡಿದ ಅವರು, ಜೂನ್ 12ರಂದು ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಮಾಡಬೇಕಾಗಿರುವುದರಿಂದ ತಾಲೂಕಿನ ಎಲ್ಲಾ ಕಾರ್ಮಿಕ ನಿರೀಕ್ಷಕರು ಆಯಾ ತಾಲ್ಲೂಕಿನ ತಹಶೀಲ್ದಾರ್‌ಗಳ ನೇತೃತ್ವದಲ್ಲಿ ಒಂದು ವಾರಗಳ ಕಾಲ ವಿಶೇಷ ತಪಾಸಣೆ ನಡೆಸಿ ಬಾಲಕಾರ್ಮಿಕರನ್ನು ಮುಖ್ಯವಾಹಿನಿಗೆ ತರುವ ಮೂಲಕ ಕಾನೂನು ಕ್ರಮಗಳನ್ನು ಪರಿಣಾಮಕಾರಿಯಾಗಿ ಜಾರಿಗೊಳಿಸಲು ಸೂಚಿಸಿದರು.

ತುಮಕೂರು ಜಿಲ್ಲೆಯಲ್ಲಿ ವಿಶ್ವ ಬಾಲ ಕಾರ್ಮಿಕ ವಿರೋಧಿ ದಿನಾಚರಣೆಯನ್ನು ಹೊಸದಾಗಿ/ನಾವಿನ್ಯತೆಯಿಂದ ಸೆಕ್ಷನ್–17ರಡಿ ನೇಮಕಗೊಂಡ ಜಿಲ್ಲೆಯ ಎಲ್ಲಾ ಇಲಾಖಾ ಅಧಿಕಾರಿಗಳು, ಅಸಂಘಟಿತ ವರ್ಗದ ಕಾರ್ಮಿಕರ ಸಂಘ, ಕಟ್ಟಡ ಕಾರ್ಮಿಕರ ಸಂಘ, ಹೋಟೆಲ್ ಅಸೋಸಿಯೇಷನ್ ಪೌರ ಕಾರ್ಮಿಕರ ಸಂಘ, ಆಟೋ ಡ್ರೈವರ್ ಯೂನಿಯನ್, ಚಿನ್ನ–ಬೆಳ್ಳಿ ವ್ಯಾಪಾರಿಗಳ ಸಂಘ ಹಾಗೂ ವಿವಿಧ ವರ್ಗಗಳ ಕಾರ್ಮಿಕ ಸಂಘಟನೆಗಳೊಳಗೊಂಡಂತೆ ಒಂದು ಸಭಾಂಗಣ ಕಾರ್ಯಕ್ರಮವನ್ನು ಆಯೋಜಿಸುವಂತೆ ಸೂಚಿಸಿದರು.

ಸಭೆಯಲ್ಲಿ ಸೆಕ್ಷನ್–17 ರಡಿ ನೇಮಕವಾದ ನಿರೀಕ್ಷಕರುಗಳು ಹಾಗೂ ತುಮಕೂರು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಅಧಿಕಾರಿಗಳು ಹಾಗೂ ಕಾರ್ಮಿಕ ಅಧಿಕಾರಿಗಳು ಮತ್ತು ಕಾರ್ಮಿಕ ನಿರೀಕ್ಷಕರುಗಳು ಭಾಗವಹಿಸಿದ್ದರು.

# ಜೆಡಿಎಸ್ ನ ಪ್ರಶ್ನೆಗಳಿಗೆ ನಾವೇ ಉತ್ತರ ಕೊಡುತ್ತೇವೆ : ದುಂತೂರು ವಿಶ್ವನಾಥ್

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ: ಬಿಡದಿ ಹೋಬಳಿಯಲ್ಲಿ ಸಮಗ್ರ ನಗರ ನಿರ್ಮಾಣದ ಹಿನ್ನೆಲೆಯಲ್ಲಿ ಭೂಸ್ವಾಧೀನದ ವಿಚಾರದಲ್ಲಿ ಜೆಡಿಎಸ್ ನಾಯಕರ ಪ್ರಶ್ನೆಗಳಿಗೆ ನಾವೇ ಉತ್ತರ ಕೊಡುತ್ತೇವೆ. ಡಿ.ಕೆ.ಶಿವಕುಮಾರ್ ಬರುವ ಅಗತ್ಯವಿಲ್ಲ ಎಂದು ಕಾಂಗ್ರೆಸ್ ಮುಖಂಡ ದಂತೂರು ವಿಶ್ವನಾಥ್ ಪ್ರತಿಕ್ರಿಯ ನೀಡಿದರು.

ಬಿಡದಿ ಹೋಬಳಿಯಲ್ಲಿ ಎಐ–ಸಿಟಿ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಹೊರಡಿಸಿರುವ ಭೂಸ್ವಾಧೀನದ ಆದೇಶದ ವಿಚಾರದಲ್ಲಿ ಜೆಡಿಎಸ್ ವಿರೋಧ ವ್ಯಕ್ತಪಡಿಸಿದೆ. ಕಾಂಗ್ರೆಸ್ ಮತ್ತು ಜೆಡಿಎಸ್ ನಾಯಕರ ನಡುವೆ ಮಾತಿನ ಜಟಾಪಟಿ ನಡೆಯುತ್ತಿದೆ. ರೈತರ ಭೂಮಿ ಕಸಿದುಕೊಳ್ಳುತ್ತಿದ್ದಾರೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿಕೆಗೆ, ಬಿಡದಿ ಹೋಬಳಿಯಲ್ಲಿ ರೈತರೇ ಇಲ್ಲ ಎಂದು ಡಿ.ಕೆ.ಶಿವಕುಮಾರ್ ಪ್ರತಿಕ್ರಿಯಿಸಿದ್ದರು. ಇದಕ್ಕೆ ಸವಾಲಾಗಿ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ನಮ್ಮ ಭೂಮಿ ನಮ್ಮ ಹಕ್ಕು, ಮಣ್ಣಿನ ಮಕ್ಕಳ ತಾಕತ್ತು ತೋರಿಸುವ ಕಾಲ ಬಂದಿದೆ ಎಂದು ಬಿಡದಿ ಹೋಬಳಿಗೆ ಗುರುವಾರ ಭೇಟಿ ಕೊಟ್ಟಿದ್ದಾರೆ. ನಿಖಿಲ್ ಭೇಟಿ ಹಿನ್ನೆಲೆಯಲ್ಲಿ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಆಯೋಜನೆಯಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.



ಸಮಗ್ರ ನಗರ ನಿರ್ಮಾಣದ ಭೂಸ್ವಾಧೀನದ ವಿಚಾರದಲ್ಲಿ ಹೆಚ್‌ಡಿಕೆ ಚರ್ಚೆಗೆ ಆಹ್ವಾನಿಸಿದ್ದಾರೆ. ಅವರ ಪ್ರಶ್ನೆಗಳಿಗೆ ಉತ್ತರ ಕೊಡಲು ಡಿ.ಕೆ.ಶಿವಕುಮಾರ್, ಡಿ.ಕೆ.ಸುರೇಶ್ ಅವರ ಅಗತ್ಯವಿಲ್ಲ, ಕಾರ್ಯಕರ್ತರಾದ ನಾವೇ ಉತ್ತರ ಕೊಡುತ್ತೇವೆ. ನಿಖಿಲ್ ಅವರು ಸ್ಥಳ, ಸಮಯ ನಿಗಧಿ ಮಾಡಲಿ. ನಿಖಿಲ್ ಬಿಡದಿ ಹೋಬಳಿ ಭೇಟಿ ವೇಳೆ ಭೂಸ್ವಾಧೀನಕ್ಕೆ ಆದೇಶ ಹೊರಟಿದ್ದು ಯಾರ ಅಧಿಕಾರವಧಿಯಲ್ಲಿ ಎಂಬುದರ ಬಗ್ಗೆ ಸರ್ಕಾರದ ದಾಖಲೆಗಳನ್ನು ಕೊಟ್ಟು ಜನರಿಗೆ ತಿಳಿಸಲಿ ಎಂದು ಸವಾಲೆಸೆದರು.

ಮೂರು ಚುನಾವಣೆಗಳಲ್ಲಿ ನಿಖಿಲ್ ಅವರನ್ನು ಕುಮಾರಸ್ವಾಮಿ ಅವರು ಗೆಲ್ಲಿಸಿಕೊಳ್ಳಲಾಗಲಿಲ್ಲ. ಜನ ಅವರನ್ನು ತಿರಸ್ಕರಿಸಿದ್ದಾರೆ. ಇಂತಹ ವ್ಯಕ್ತಿಯನ್ನು ಬಿಡದಿ ಹೋಬಳಿಗೆ ರಿಯಾಲಿಟಿ ಚೆಕ್‌ಗೆ ಕಳುಹಿಸಿದ್ದಾರೆ ಎಂದು ಲೇವಡಿಯಾಡಿದರು.

ರಾಮನಗರದ ಅರ್ಚಕರಹಳ್ಳಿ ಬಳಿ ರಾಜೀವ್ ಗಾಂಧಿ ವಿಶ್ವವಿದ್ಯಾಲಯ ನಿರ್ಮಾಣ ಯೋಜನೆ ಕೂಡ ಹೆಚ್‌ಡಿಕೆ ಅವರ ಕೂಸು. 2007ರಲ್ಲಿ ಈ ಯೋಜನೆಗೆ ಆದೇಶ ಹೊರಡಿಸಲಾಗಿದೆ. ಇದರ ಸಂಬಂಧ ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆ. ಭೂಸ್ವಾಧಿನಕ್ಕೆ ಮುನ್ನ ಕುಮಾರಸ್ವಾಮಿ ಅವರು ರೈತರ ಸಭೆ ಕರೆದಿದ್ದರಾ? ಘೋಷಿಸಿದಂತೆ ವಿವಿ ನಿರ್ಮಾಣ ಮಾಡಲಿಲ್ಲವೇಕೆ ಎಂದು ಪ್ರಶ್ನಿಸಿದ ಅವರು, ಇವೆಲಕ್ಕೆ ಉತ್ತರ ಕೊಡದೆ ಬಿಡದಿ ಹೋಬಳಿಗೆ ಕುಮರಸ್ವಾಮಿ ತಮ್ಮ ಮಗ ನಿಖಿಲ್‌ರನ್ನು ಕಳುಹಿಸಿದ್ದಾರೆ ಎಂದು ಲೇವಡಿಯಾಡಿದರು.

ಮಂಡ್ಯದಲ್ಲಿ ತಮ್ಮ ಮಗನನ್ನು ಗೆಲ್ಲಿಸಿಕೊಳ್ಳಲು ತಾವು ಹಾಗೂ ಡಿಕೆಶಿ ಅವರು ಜೋಡೆತ್ತು ಎಂದು ಕರೆದುಕೊಂಡಿದ್ದಾರೆ. ಮೂರು ಚುನಾವಣೆಗಳಾದರು ಮಗನನ್ನು ಗೆಲ್ಲಿಸಿಕೊಳ್ಳಲಾಗಲಿ ಲ್ಲ. ಜನ ನಿಮ್ಮನ್ನು ತಿರಸ್ಕರಿಸಿದ್ದಾರೆ. ಮುಖ್ಯಮಂತ್ರಿ ಆಗಲು ಒಮ್ಮೆ ಬಿಜೆಪಿ ಮತ್ತೊಮ್ಮೆ ಕಾಂಗ್ರೆಸ್ಸನ್ನು ಕುಮಾರಸ್ವಾಮಿ ತಬ್ಬಿಕೊಂಡಿದ್ದರು. ಮುಖ ಮುಚ್ಚಿಕೊಂಡು ಸೋನಿಯಾ ಗಾಂಧಿಯವರನ್ನು ಭೇಟಿ ಮಾಡಿದ್ದರು. ಅಧಿಕಾರಕ್ಕೆ ಸಹಕರಿಸಿದ ಬಿಜೆಪಿ ಮತ್ತು ಕಾಂಗ್ರೆಸ್ಸನ್ನು ಕುಮಾರಸ್ವಾಮಿ ಅವರು ಕಾಲಿನಿಂದ ಒದ್ದಿದ್ದಾರೆ. ರಾಮನಗರದಲ್ಲಿ ಕುಮಾರಸ್ವಾಮಿ ಅವರ ಮಡದಿ ಅನಿತಾ ಅವರು ಸ್ಪರ್ಧಿಸಿದಾಗ ಡಿ.ಕೆ.ಶಿವಕುಮಾರ್ ಮತ್ತು ಡಿ.ಕೆ.ಸುರೇಶ್ ಶ್ರಮಿಸಿ ಗೆಲ್ಲಿಸಿದ್ದಾರೆ, ಹೀಗಿದ್ದರು, ಕಾಂಗ್ರೆಸ್ ನಾಯಕರ ಬಗ್ಗೆ ಹಗುರವಾಗಿ ಮಾಡನಾಡುತ್ತಿದ್ದಾರೆ ಎಂದು ಟೀಕಾಪ್ರಹಾರ ನಡೆಸಿದರು.

ಬಿಡದಿ ಬಳಿಯಲ್ಲಿ ಟೌನ್‌ಶಿಪ್ ನಿರ್ಮಾಣಕ್ಕೆ ಭೂಸ್ವಾಧೀನದ ಪ್ರಕಟಣೆ ಹೊರಡಿಸಿದ ನಂತರ ಅದನ್ನು ಡಿ–ನೋಟಿಫೈ ಮಾಡಲಿ ರದ್ದುಪಡಿಸಲು ಕುಮಾರಸ್ವಾಮಿಗೆ ಆಗಲಿಲ್ಲ. ಕಾರಣ ಬಿ.ಎಸ್.ಯಡಿಯೂರಪ್ಪ ಅವರು ಡಿ–ನೋಟಿಫೈ ಮಾಡಿ, ಜೈಲು ಸೇರಿದ್ದರು. ತಾವು ಸಹ ಜೈಲು ಸೇರುವ ಭೀತಿಯಿಂದಾಗಿ ಕುಮಾರಸ್ವಾಮಿ ಡಿ–ನೋಟಿಫೈ ಮಾಡಲಿಲ್ಲ ಎಂದು ಲೇವಡಿಯಾಡಿದರು.

ಪತ್ರಿಕಾಗೋಷ್ಠಿಯಲ್ಲಿ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎ.ಬಿ.ಚೇತನ್ ಕುಮಾರ್, ಬಮೂಲ್ ನಿರ್ದೇಶಕ ಲಿಂಗೇಶ್ ಕುಮಾರ್, ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಪ್ರಧಾನ ಕಾರ್ಯದರ್ಶಿ ಕಾಂತರಾಜು, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವಿ.ಎಚ್.ರಾಜು, ಮುಖಂಡರುಗಳಾದ ವಾಸಿಲ್ ಖಾನ್, ಸಿಎರ್ ವೆಂಕಟೇಶ್, ಜಯಣ್ಣ, ಪರ್ವಿಜ್ ಪಾಷ, ಸುನಿಲ್ ಕುಮಾರ್, ರಂಗನಾಥ್ ಸೇರಿದಂತೆ ಹಲವರು ಉಪಸ್ಥಿತರಿದ್ದರು

# 100 ದೇಗುಲಗಳಿಗೆ ಒಂದು ಶಾಲೆ ಸಮ; ಶಾಸಕ ಇಕ್ಬಾಲ್ ಹುಸೇನ್

ಸೂರ್ಯಪ್ರಗತಿನ್ಯೂಸ್.ಕಾಂ

ನಾವು ನಮ್ಮ ಮಕ್ಕಳಿಗೆ ಆಸ್ತಿ ಮಾಡುತ್ತೀವೋ ಇಲ್ಲವೋ ಶಿಕ್ಷಣ ಕೊಡಿಸುವ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕು 1 00ದೇಗುಲಗಳಿಗೆ ಒಂದು ಶಾಲೆ ಸಮ ಎಂದು ರಾಮನಗರ ವಿಧಾನಸಭಾ ಕ್ಷೇತ್ರದ ಶಾಸಕ ಇಕ್ಬಾಲ್ ಹುಸೇನ್ ಹೇಳಿದರು.

ಹಾರೋಹಳ್ಳಿ ತಾಲೂಕಿನ ಚೀಲೂರು ಗ್ರಾಮದಲ್ಲಿ ನಿರ್ಮಾಣ ಹಂತದಲ್ಲಿರುವ ಕರ್ನಾಟಕ ಪಬ್ಲಿಕ್ ಶಾಲೆಯ ಕಟ್ಟಡವನ್ನು ವೀಕ್ಷಿಸಿ ಬಳಿಕ ನಡೆದ ಸಭೆಯಲ್ಲಿ ಮಾತನಾಡಿದ ಅವರು, ಗುಣಮಟ್ಟದ ಶಿಕ್ಷಣವನ್ನು ಮಕ್ಕಳಿಗೆ ಕೊಡಿಸುವುದರಿಂದ ಮಕ್ಕಳು ಶಿಕ್ಷಣವಂತರಾಗುತ್ತಾರೆ ಅವರ ಜೀವನವನ್ನು ಅವರೇ ರೂಪಿಸಿಕೊಳ್ಳಲಿದ್ದಾರೆ. ಪೋಷಕರು ಈ ನಿಟ್ಟಿನಲ್ಲಿ ಕಾರ್ಯಪ್ರವೃತ್ತರಾಗಬೇಕು ಗುಣಮಟ್ಟದ ಶಿಕ್ಷಣ ಕೊಡಿಸುವ ಕಡೆ ಗಮನಹರಿಸಬೇಕು ಎಂದು ಸಲಹೆ ನೀಡಿದರು.



ಗುಣಮಟ್ಟದ ಶಿಕ್ಷಣ; ರಾಜ್ಯಾದ್ಯಂತ ಗುಣಮಟ್ಟದ ಶಿಕ್ಷಣವನ್ನು ನೀಡುವ ನಿಟ್ಟಿನಲ್ಲಿ ಕೆಪಿಎಸ್ ಶಾಲೆಗಳನ್ನು ನಿರ್ಮಿಸುವ ಕೆಲಸ ಮಾಡಲಾಗುತ್ತಿದೆ. ಕೆಪಿಎಸ್ ಶಾಲೆಗಳಲ್ಲಿ ಎಲ್ಲಾ ರೀತಿಯ ಸೌಲಭ್ಯಗಳು ಇರಲಿವೆ ಸಿಎಸ್‌ಆರ್ ಅನುದಾನದಲ್ಲಿ ಶಾಲೆಗಳನ್ನು ನಿರ್ಮಿಸುವ ಕೆಲಸ ಮಾಡಲಾಗುತ್ತಿದೆ. ಯಾವ ಖಾಸಗೀ ಶಾಲೆಗಳಿಗೂ ಕಮ್ಮಿ ಇಲ್ಲದಂತೆ ಎಲ್ಲಾ ರೀತಿಯ ವ್ಯವಸ್ಥೆಗಳು ಇರಲಿವೆ ಈ ಬಗ್ಗೆ ಪೋಷಕರಲ್ಲಿ ಯಾವುದೇ ರೀತಿಯ ಗೊಂದಲ ಬೇಡ. ನಮ್ಮ ನಿಜವಾದ ಆಸ್ತಿಯೇ ನಮ್ಮ ಮಕ್ಕಳು ನಮ್ಮ ಮಕ್ಕಳನ್ನು ಉಳಿಸಿಕೊಳ್ಳುವ ಕೆಲಸ ಮಾಡಬೇಕು ಮಕ್ಕಳ ಬಗ್ಗೆ ಆಲೋಚನೆ ಇರಲಿ ಎಂದರು.

ಗೊಂದಲ ಬೇಡ; ಮ್ಯಾಗ್ನೆಟ್ ಶಾಲೆ ವಿಚಾರದಲ್ಲಿ ಯಾವುದೇ ರೀತಿಯ ಗೊಂದಲ ಬೇಡ ಯಾವುದೇ ರೀತಿಯ ವದಂತಿಗಳಿಗೂ ಕಿವಿಗೊಡಬೇಡಿ ನಮ್ಮ ಗ್ರಾಮದ ಶಾಲೆ ಮುಚುತ್ತದೆ ಎಂದು ಆಲೋಚನೆ ಮಾಡಬೇಡಿ ನಮ್ಮ ಗ್ರಾಮದ ಏನಿದ್ದರೂ ಗುಣಮಟ್ಟದ ಶಿಕ್ಷಣದ ಕಡೆ ಮಾತ್ರ ಇರಲಿ ಕೆಪಿಎಸ್ ಶಾಲೆಗಳಲ್ಲಿ ಗುಣಮಟ್ಟದ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ಇರಲಿದೆ ಎಂದು ಹೇಳಿದರು.

ಇನ್ನು ನಮ್ಮ ನಾಯಕರಾದ ಡಿಕೆ ಶಿವಕುಮಾರ್ ಮತ್ತು ಡಿಕೆ ಸುರೇಶ್ ಅವರ ದೂರಾಲೋಚನೆಯಿಂದ ಶಿಕ್ಷಣ ಕ್ಷೇತ್ರದಲ್ಲಿ ಕ್ರಾಂತಿ ನಡೆಯುತ್ತಿದೆ ಈ ನಿಟ್ಟಿನಲ್ಲಿ ರಾಜ್ಯಾದ್ಯಂತ ಕೆಪಿಎಸ್ ಶಾಲೆಗಳು ನಿರ್ಮಾಣವಾಗುತ್ತಿವೆ. ಎಲ್ಲವೂ ಅಚ್ಚುಕಟ್ಟಾಗಿರಲಿದೆ. ನಮ್ಮ ದೇಶ ಸಂಪಾದ್ಭರಿತವಾಗಿದೆ ಇಂದು ಎಲ್ಲಾ ಕ್ಷೇತ್ರದಲ್ಲೂ ನಾವು ಮುಂದಿದ್ದೇವೆ ಶಿಕ್ಷಣ ಕ್ಷೇತ್ರದಲ್ಲಿಯೂ ಆ ಪ್ರಗತಿಯನ್ನು ನಾವು ಸಾಧಿಸುತ್ತಿದ್ದೇವೆ ಈ ನಿಟ್ಟಿನಲ್ಲಿ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಬೇಕು ಎಂದು ಶಾಸಕ ಇಕ್ಬಾಲ್ ಹುಸೇನ್ ಹೇಳಿದರು.

ಇದೇ ವೇಳೆ ಡಿಡಿಪಿಐ ಸ್ವಾಮಿ, ಬಿಇಒ ಮತ್ತಿಗೌಡ, ಪಿಡಿಒ ಮಹೇಶ್, ಮುಖಂಡರುಗಳಾದ ಕೇಬಲ್ ರವಿ,ಲೋಕೇಶ್ ,ಸಣ್ಣಪ್ಪ,ಹೊನ್ನಗಿರಿಗೌಡ,ಕುಮಾರ್ ರಾವ್,ಹರೀಶ್,ಬಸವರಾಜು, ಎಸ್. ಡಿ. ಎಂ ಸಿ ಅಧ್ಯಕ್ಷ ಚೀಲೂರು ಮುನಿರಾಜು, ಸೇರಿದಂತೆ ಇನ್ನಿತರರು ಹಾಜರಿದ್ದರು.

# ಡಿಕೆಶಿ ಮುಂದಿನ ಸಿಎಂ ಯುವ ಕಾಂಗ್ರೆಸ್‌ನಿಂದ ಸಂಭ್ರಮಾಚರಣೆ

ಸೂರ್ಯಪ್ರಗತಿನ್ಯೂಸ್.ಕಾಂ



ರಾಮನಗರ: ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಗುರುವಾರ ರಾಜ್ಯಪಾಲರನ್ನು ಭೇಟಿಯಾಗಿ ರಾಜೀನಾಮೆ ನೀಡಲಿದ್ದಾರೆ ಎಂಬ ಸುದ್ದಿ ಹೊರಬಿದ್ದ ಹಿನ್ನಲೆಯಲ್ಲಿ ಉಪಮುಖ್ಯಮಂತ್ರಿಯಾಗಿರುವ ಡಿ.ಕೆ.ಶಿವಕುಮಾರ್ ಮುಂದಿನ ಮುಖ್ಯಮಂತ್ರಿಯಾಗಲಿದ್ದಾರೆಂದು ಜಿಲ್ಲಾ ಯುವ ಕಾಂಗ್ರೆಸ್ ಕಾರ್ಯಕರ್ತರು ಪಟಾಕಿ ಸಿಡಿಸಿ ಸಂಭ್ರಮಿಸಿದರು. ನಗರದ ಐಜೂರು ವೃತ್ತದಲ್ಲಿ ಬುಧವಾರ ಕೇಂದ್ರ ಸರ್ಕಾರದ ವಿರುದ್ದ ಪ್ರತಿಭಟನೆ ನಡೆಸಿದ ನಂತರ, ಒಂದೆಡೆ ಸೇರಿದ ಕಾರ್ಯಕರ್ತರು ಡಿ.ಕೆ.ಶಿವಕುಮಾರ್ ಅವರಿಗೆ ಜೈಕಾರ ಹಾಕುತ್ತಾ, ಇಷ್ಟು ದಿನಗಳು ಕಾದ ಸಮಯ ಇಂದು ಬಂತು ಎಂದು ಡಿಕೆ...ಡಿಕೆ... ಘೋಷಣೆ ಕೂಗಿ ಸಂಭ್ರಮಿಸಿದರಲ್ಲದೇ ಸಿಹಿ ಹಂಚಿ ಖುಷಿಪಟ್ಟರು.

ಈ ವೇಳೆ ಮಾತನಾಡಿದ ಯುವ ಘಟಕದ ಜಿಲ್ಲಾಧ್ಯಕ್ಷ ಸಿ.ವಿ.ಚಂದ್ರಸಾಗರ್, ಹಲವು ವರ್ಷಗಳ ಕನಸು ನನಸಾಗುವ ಸಮಯ ಬಂದಿದೆ, ನಮ್ಮ ನಾಯಕರಾದ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಸಿಎಂ ಆಗುತ್ತಾರೆ, ಬೆಂಗಳೂರು ದಕ್ಷಿಣ ಜಿಲ್ಲೆ ಅಭಿವೃದ್ದಿಪರ್ವ ಆರಂಭವಾಗಲಿದೆ, ಅವರು ಮುಖ್ಯಮಂತ್ರಿಯಾಗಲೆಂದು ಕಾಂಗ್ರೆಸ್ ಕಾರ್ಯಕರ್ತರು ದೇವರಲ್ಲಿ ಮಾಡಿದ ಪ್ರಾರ್ಥನೆ ಈಡೇರಿದೆ ಎಂದರು.

ಡಿ.ಕೆ.ಶಿವಕುಮಾರ್ ಅವರ ಲಕ್ಷಾಂತರ ಅಭಿಮಾನಿಗಳು ಅವರು ಮುಖ್ಯಮಂತ್ರಿಯಾಗಲೆಂದು ಅವರ ಹುಟ್ಟುಹಬ್ಬದಂದು ವಿಶೇಷ ಪೂಜೆ, ಪ್ರಾರ್ಥನೆ ಸಲ್ಲಿಸಿ ಹರಕೆ ಹೊತ್ತಿದ್ದರು, ಅದು ಇನ್ನೆರಡು ದಿನಗಳಲ್ಲಿ ಸಾಕಾರವಾಗಲಿದೆ. ನಮ್ಮಂತಹ ಲಕ್ಷಾಂತರ ಕಾರ್ಯಕರ್ತರನ್ನು ಡಿಕೆ ಸಾಹೇಬರು, ಡಿ.ಕೆ.ಸುರೇಶ್ ಬೆಳೆಸಿದ್ದಾರೆ. ಇವರು ನಮ್ಮ ನಾಯಕರು ಕನಕಪುರ ಬಂಡೆ, ಟ್ರಬಲ್ ಶೂಟರ್ ಎಂದೇ ಖ್ಯಾತಿಯಾಗಿರುವಂತಹ ಡಿಕೆಶಿ ಮುಖ್ಯಮಂತ್ರಿಯಾಗಿ ಆಯ್ಕೆಯಾಗುತ್ತಿರುವುದು ನಮಗೆಲ್ಲ ಖುಷಿ ಕೊಡುವ ವಿಚಾರ ಎಂದರು.

ಯೂತ್ ಕಾಂಗ್ರೆಸ್‌ನಿಂದ ಬಂದಂತವರು. ಅವರಿಗೆ ಮುಖ್ಯಮಂತ್ರಿಯಾಗುವ ಅವಕಾಶ ಸಿಕ್ಕಿದೆ. ಮುಖ್ಯಮಂತ್ರಿಯಾಗುವ ಆ ಸಮಯವನ್ನು ಕಣ್ತುಂಬಿಕೊಳ್ಳಲು ನಾವು ಕಾತರರಾಗಿದ್ದೇವೆ, ಇಡೀ ರಾಜ್ಯದ ಸಮಗ್ರ ಅಭಿವೃದ್ಧಿ ಡಿ.ಕೆ.ಶಿವಕುಮಾರ್ ಅವರಿಂದ ಸಾಧ್ಯವಾಗಲಿದೆ ಎಂದು ಅಶಯ ವ್ಯಕ್ತಪಡಿಸಿದರು.

# ರಾಮನಗರ ಸುದ್ದಿ ಕಾರ್ನರ್

# ಟಿ.ಹೊಸಹಳ್ಳಿ ಪಿಡಿಒ ವರ್ಗಾವಣೆಗೆ ಗ್ರಾಮಸ್ಥರ ಆಕ್ರೋಶ

ಸೂರ್ಯಪ್ರಗತಿನ್ಯೂಸ್.ಕಾಂ

ರಾಮನಗರ.;ಹಾರೋಹಳ್ಳಿ ತಾಲೂಕಿನ ಟಿ.ಹೊಸಹಳ್ಳಿ ಗ್ರಾಮ ಪಂಚಾಯಿತಿ ಪಿಡಿಒ ಮಂಜುಳಾ ಅವರ ವರ್ಗಾವಣೆಗೆ ವಿರೋಧ ವ್ಯಕ್ತವಾಗಿದ್ದು ಪಿಡಿಒ ವರ್ಗಾವಣೆಗೆ ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಟಿ.ಹೊಸಹಳ್ಳಿ ಗ್ರಾ.ಪಂ ಎದುರು ಜಮಾವಣೆಗೊಂಡ ಗ್ರಾಮಸ್ಥರು ಪಿಡಿಒ ವರ್ಗಾವಣೆಗೆ ಆಕ್ರೋಶ ವ್ಯಕ್ತಪಡಿಸಿ, ಇಒ ಅಪೂರ್ವ ಕುಲಕರ್ಣಿಯವರ ಚಿತಾವಣೆಯಿಂದಲೇ ವರ್ಗಾವಣೆ ನಡೆದಿದೆ ಎಂದು ಆರೋಪಿಸಿದರು.

ಇದೇ ವೇಳೆ ಗ್ರಾಮಸ್ಥ ವೆಂಕಟೇಶ್ ಮಾತನಾಡಿ, ಟಿ.ಹೊಸಹಳ್ಳಿ ಗ್ರಾಮ ಪಂಚಾಯಿತಿಗೆ ಮಂಜುಳಾ ಅವರು ಕಳೆದ 4–5ತಿಂಗಳ ಹಿಂದೆ ಬಂದಿದ್ದಾರೆ ಹೀಗಿರುವಾಗ ಅವರನ್ನು ಏಕಾಏಕಿ ವರ್ಗಾವಣೆ ಮಾಡಿರುವುದರ ಗುಟ್ಟನ್ನು ಜನತೆಗೆ ತಿಳಿಸಬೇಕು ಇಒ ಅಪೂರ್ವ ಕುಲಕರ್ಣಿಯವರಿಗೆ ಕಪ್ಪ ಕೊಡಲ;ಇಲ್ಲ ಎಂಬ ಕಾರಣಕ್ಕೆ ವರ್ಗಾವಣೆ ಷಡ್ಯಂತ್ರ ನಡೆದಿದೆ. ಈ ಬಗ್ಗೆ ಜಿ.ಪಂ ಸಿಇಒ ಗಮನಹರಿಸಬೇಕು ಉತ್ತಮ ಕೆಲಸಗಾರರನ್ನು ನಮ್ಮ ಗ್ರಾ.ಪಂ ಅಲ್ಲಿಯೇ ಕೆಲಸ ಮಾಡಲು ಬಿಡಬೇಕು ಮಂಜುಳಾ ಅವರು ಇಲ್ಲಿಗೆ ಪಿಡಿಒ ಆಗಿ ಬಂದಾಗಿನಿಂದಲೂ ಅಪೂರ್ವ ಕುಲಕರ್ಣಿಯವರು ಅವರನ್ನು ದ್ವೇಷದಿಂದ ಕಾಣುತ್ತಿದ್ದರು



ಇದೀಗ ಅವರ ವರ್ಗಾವಣೆ ಮೂಲಕ ಇಒ ಅವರು ಅವರ ಮೇಲಿನ ದ್ವೇಷ ತೀರಿಸಿಕೊಂಡಿದ್ದಾರೆ. ಅಭಿವೃದ್ಧಿ ಕೆಲಸ ಮಾಡುವವರಷ್ಟೇ ನಮಗೆ ಬೇಕು ಕಳ್ಳ, ಕಾಕರು ಬೇಡ.ಜಿಲ್ಲಾಡಳಿತ ಈ ಬಗ್ಗೆ ಗಮನಹರಿಸಬೇಕು ಎಂದು ವೆಂಕಟೇಶ್ ಹೇಳಿದರು.

ಇದೇ ವೇಳೆ ಕೆಆರ್.ಎಸ್ ಪಕ್ಷದ ಮುಖಂಡ ಕಾಳಪ್ಪ ಮಾತನಾಡಿ, ಪಿಡಿಒ ಮಂಜುಳಾ ಅವರು ಪಿಡಿಒ ಆಗಿ ಅಧಿಕಾರ ವಹಿಸಿಕೊಂಡು ಕೇವಲ 4ತಿಂಗಳು ಕಳೆದಿವೆ ಹೀಗಿರುವಾಗ ಅವರನ್ನು ಏಕಾಏಕೀ ತಾಲೂಕು ಕಚೇರಿಗೆ ವರ್ಗಾವಣೆಗೊಳಿಸಲಾಗಿದೆ. ರಾಜಕೀಯ ಕುಮ್ಮಕ್ಕಿನಿಂದ ಈ ರೀತಿಯ ಬೆಳವಣಿಗೆ ನಡೆದಿದ್ದು ಇಒ ಅವರು ತಾಲೂಕಿನಲ್ಲಿ ರಾಜಕೀಯ ಮಾಡುತ್ತಿದ್ದಾರೆ ಪಿಡಿಒ ಅವರು ವಿಶೇಷ ಚೇತನರು ಅವರ ಮೇಲೆ ಇಒ ಅವರಿಗೆ ಕರುಣೆಯೇ ಇಲ್ಲ ಯಾವ ಕಾರಣಕ್ಕಾಗಿ ಅವರನ್ನು ವರ್ಗಾಯಿಸಲಾಗಿದೆ ಎಂಬುದನ್ನು ಬಹಿರಂಗಪಡಿಸಬೇಕು ಇಲ್ಲವಾದರೆ ತಾಲೂಕು ಕೇಂದ್ರದಲ್ಲಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಇದೇ ವೇಳೆ ಗ್ರಾಮಸ್ಥರಾದ ಷಣ್ಮುಖ,ಮುತ್ತುರಾಜು,ನಾರಾಯಣಸ್ವಾಮಿ,ನಾಗರಾಜು, ಲಕ್ಷ್ಮಮ್ಮ,ರುಕ್ಕಮ್ಮ,ಉಮೇಶ್ ಸೇರಿದಂತೆ ಇನ್ನಿತರರು ಇದ್ದರು.

# ಆದಾಯ ತೆರಿಗೆ ಅಧಿಕಾರಿಗಳಿಂದ ಜಾಗೃತಿ ಅಭಿಯಾನ




ರಾಮನಗರ: ಕಳೆದ ಏಪ್ರಿಲ್‌ನಿಂದ ಜಾರಿಗೆ ಬಂದಿರುವ ಆದಾಯ ತೆರಿಗೆ ಕಾಯ್ದೆ 2026ರ ಕುರಿತು ಆದಾಯ ತೆರಿಗೆ ಇಲಾಖೆಯ ಅಧಿಕಾರಿಗಳು ಜಾಗೃತಿ ಅಭಿಯಾನ ನಡೆಸಿದರು.

ನಗರದ ಅರ್ಚಕರಹಳ್ಳಿಯಲ್ಲಿರುವ ಯೂನಿವರ್ಸಲ್ ಪಬ್ಲಿಕ್ ಶಾಲೆಯಲ್ಲಿ ರೋಟರಿ ಸಿಲ್ಕ್ ಸಿಟಿ ಸಹಯೋಗದಲ್ಲಿ ಆಯೋಜನೆಯಾಗಿದ್ದ ಪ್ರಾರಂಭ್ 2026 ಕಾರ್ಯಕ್ರಮದಲ್ಲಿ ಅಧಿಕಾರಿಗಳು ನೂತನ ಕಾಯ್ದೆಯಲ್ಲಿನ ಹಲವಾರು ಬದಲಾವಣೆಗಳ ಬಗ್ಗೆ ಮಾಹಿತಿ ಒದಗಿಸಿದರು.

ವಿಶೇಷವಾಗಿ ಎನ್.ಜಿ.ಒಗಳು, ಲಾಭರಹಿತ ಸಂಸ್ಥೆಗಳು, ಟ್ರಸ್ಟ್‌ಗಳು, ಶಾಲಾ ಆಡಳಿತ ಮಂಡಳಿಗಳು 12ಎ ಮತ್ತು 80ಜಿ ನೋಂದಣಿ ಮಾಡಿಕೊಳ್ಳುವುದರಿಂದ ಲಾಭಗಳೇನು ಎಂಬ ವಿಚಾರವನ್ನು ತಿಳಿಯಪಡಿಸಿದರು.ಈ ಸಂದರ್ಭದಲ್ಲಿ ಬೆಂಗಳೂರುವ ವೃತ್ತ 1ರ ಆದಾಯ ತೆರಿಗೆ ಇಲಾಖೆಯ (ವಿನಾಯಿತಿ) ವಿಭಾಗದ ಅಧಿಕಾರಿ ಲಕ್ಕಪ್ಪ ಎಚ್ ಉದ್ದಣ್ಣನವರ್, ಹರಿಣಿ, ಎಂ.ಎಲ್.ಚಂದ್ರಪ್ರಕಾಶ್ ಮತ್ತು ಜಿಲ್ಲಾ ಆದಾಯ ತೆರಿಗೆ ಅಧಿಕಾರಿ ವಿದ್ಯಾ, ರೋಟರಿ ಸಿಲ್ಕ್ ಸಿಟಿ ಪದಾಧಿಕಾರಿಗಳು ಮತ್ತು ಸದಸ್ಯರು ಇದ್ದರು.

# ನೆಹರು ಅವರು ರೂಪಿಸಿದ ರಾಜಕೀಯ ನೀತಿ, ವಿದೇಶಾಂಗ ನೀತಿಗಳು ಇಡೀ ವಿಶ್ವಕ್ಕೆ ಮಾದರಿ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು– ಕೆಂಬ್ರಿಡ್ಜ್ ವಿಶ್ವವಿದ್ಯಾಲಯದ ಪದವಿಧರರಾಗಿ, ಪಂಡಿತ್ ಜವಹರಲಾಲ್ ನೆಹರು ಅವರು ರೂಪಿಸಿದ ರಾಜಕೀಯ ನೀತಿ, ವಿದೇಶಾಂಗ ನೀತಿಗಳು ಇಡೀ ವಿಶ್ವಕ್ಕೆ ಮಾದರಿಯಾಗಿವೆ ಎಂದು ಜಿಲ್ಲಾ ಕಾಂಗ್ರೆಸ್ ಮಾಜಿ ಅಧ್ಯಕ್ಷ ಕೆಂಚಮಾರಯ್ಯ ತಿಳಿಸಿದ್ದಾರೆ.

ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಡಿಸಿಸಿ ಅಧ್ಯಕ್ಷ ಜಿ.ಚಂದ್ರಶೇಖರಗೌಡ ಅವರ ಅಧ್ಯಕ್ಷತೆಯಲ್ಲಿ ಆಯೋಜಿಸಿದ್ದ ಪಂಡಿತ ಜವಹರಲಾಲ್ ನೆಹರು ಅವರ ಪುಣ್ಯ ಸ್ಮರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡುತಿದ್ದ ಅವರು,ಅವರ ರೂಪಿಸಿದ ಅಲಿಪ್ತ ನೀತಿಗಳನ್ನು ಮೆಚ್ಚಿಕೊಂಡು ವಿಶ್ವ ಸಂಸ್ಥೆ ಅವರನ್ನು ಶಾಂತಿ ಧೂತ ಎಂಬ ಬಿರುದನ್ನು ನೀಡಿತ್ತು ಎಂದರು. ನೆಹರು ಕುಟುಂಬ ಇಡೀ ತಮ್ಮ ಜೀವನವನ್ನೇ ದೇಶದ ಸ್ವಾತಂತ್ರ ಮತ್ತು ಅಭಿವೃದ್ದಿಗೆ ಮುಡಿಪಾಗಿಟ್ಟಿದೆ.ಭಾರತಕ್ಕೆ ಸ್ವಾತಂತ್ರ ಬಂದಾಗ ಇದ್ದ ಸಾಕ್ಷರತೆ ಪ್ರಮಾಣ ಶೇ 14 ಮಾತ್ರ.ಪಂಚವಾರ್ಷಿಕ ಯೋಜನೆಗಳ ಮೂಲಕ ಶಿಕ್ಷಣ, ಕೈಗಾರಿಕೆ, ಉದ್ಯೋಗ, ಕೃಷಿಯ ಬೆಳವಣಿಗೆ ಭದ್ರ ಅಡಿಪಾಯ ಹಾಕಿದರು.ಬಡತನ ನಿವಾರಣೆಗೆ ಮುಂದಾಗಿದಲ್ಲದೆ,23 ಇದ್ದ ಡ್ಯಾಂಗಳ ಸಂಖ್ಯೆಯನ್ನು 5000ಕ್ಕೆ ಹೆಚ್ಚಿಸಿ, ನೀರಾವರಿ ಪೂರಕ ಕೃಷಿಗೆ ಒತ್ತು ನೀಡಿ, ಆಹಾರದಲ್ಲಿ ಸ್ವಾವಲಂಬನೆ ಸಾಧಿಸಲು ಸಾಧ್ಯವಾಯಿತು ಎಂದು ಕೆಂಚಮಾರಯ್ಯ ನುಡಿದರು.

ಶೂನ್ಯದಿಂದ ಸ್ವಾವಲಂಬನೆಯವರಗೆ ದೇಶವನ್ನು ತೆಗೆದುಕೊಂಡು ಹೋದ ನೆಹರು ಕುಟುಂಬವನ್ನು ದೇಶಕ್ಕಾಗಿ ಏನು ಮಾಡಿದೆ ಎಂದು ಬಿಜೆಪಿ ಕೇಳುತ್ತಿದೆ.ನೆಹರು ತಂದೆ ಮೋತಿಲಾಲ್ ನೆಹರು ತಮ್ಮ ದೆಹಲಿ ಮತ್ತು ಅಹಮದಾಬಾದ್‌ನಲ್ಲಿರುವ 3000 ಎಕರೆ ಜಾಗವನ್ನು ಸರಕಾರಕ್ಕೆ ದಾನವಾಗಿ ನೀಡಿದರು.ಐಐಎಸ್ಸಿ,ವಿಜ್ಞಾನ ತಂತ್ರಜ್ಞಾನಕ್ಕೆ ಒತ್ತು ನೀಡಿ, ದೇಶವನ್ನು ಉನ್ನತ್ತಿಯತ್ತ ತೆಗೆದುಕೊಂಡು ಹೋದರು.ಆದರೆ ಇಂದು ದೇಶ ಅರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಅದೋಗತಿಗೆ ತಲುಪಿದ್ದರೂ,ಎಲ್ಲದಕ್ಕೂ ನೆಹರು ಕಾರಣ ಎಂದು ಹೇಳುತ್ತಿರುವುದು ನಾಚಿಕೆಗೇಡಿನ ಸಂಗತಿ. ಇವರಿಗೆ ಕಾಂಗ್ರೆಸ್ ಕಾರ್ಯಕರ್ತರು ತಕ್ಕ ಉತ್ತರ ನೀಡಬೇಕಾಗಿದೆ.ರಾಹುಲ್‌ಗಾಂಧಿ ಅವರ ಕೈ ಬಲಪಡಿಸುವ ಮೂಲಕ,ಈ ದೇಶವನ್ನು ಆಘೋಷಿತ ತುರ್ತು ಪರಿಸ್ಥಿತಿಯಿಂದ ಹೊರ ತರಬೇಕಾಗಿದೆ ಎಂದು ಕೆಂಚಮಾರಯ್ಯ ತಿಳಿಸಿದರು.



ಮಾಜಿ ಶಾಸಕ ಡಾ.ಎಸ್.ಷಪಿ ಅಹಮದ್ ಮಾತನಾಡಿ,ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ಮೊದಲು ಪಕ್ಷದ ಹುಟ್ಟಿ, ಬೆಳೆದು ಬಂದ ಇತಿಹಾಸವನ್ನು ಅರಿಯಬೇಕಾಗಿದೆ.ಕಾಂಗ್ರೆಸ್ ಬಡವರ ಪರವಾಗಿ ಇರುವ ಪಕ್ಷ.ಅಧಿಕಾರಕ್ಕೆ ಅಂಟಿಕೊಂಡ ಪಕ್ಷವಲ್ಲ. ಎಸ್.ಐ.ಆರ್. ಮೂಲಕ ಕಾಂಗ್ರೆಸ್‌ಪಕ್ಷದ ಸಂಪ್ರದಾಯಕ ಮತಗಳಿಗೆ ಕಡಿವಾಣ ಹಾಕಲು ಹೊರಟಿದೆ.ಎಚ್ಚೆತ್ತುಕೊಂಡು ಕೆಲಸ ಮಾಡದಿದ್ದರೆ ಅಪಾಯ ಕಟ್ಟಿಟ್ಟಬುತ್ತಿ.2026–2027– 2028 ಮತ್ತು 2028 ಚುನಾವಣಾ ವರ್ಷ. ಮೈಮರೆತರೇ ಪಕ್ಷ ಅಧಿಕಾರ ಬರುವುದು ಮರೀಚಿಕೆಯಾಗಲಿದೆ. ರಾಜ್ಯ ಗೃಹ ಸಚಿವರು ಆಗಿರುವ ಡಾ.ಜಿ.ಪರಮೇಶ್ವರ್ ಅವರನ್ನು ಮುಖ್ಯಮಂತ್ರಿಯಾಗಿ ಮಾಡಬೇಕೆಂದು ತುಮಕೂರು ಜಿಲ್ಲಾ ಕಾಂಗ್ರೆಸ್ ನಿಂದ ನಿರ್ಣಯ ಮಾಡಿ ಎಐಸಿಸಿಗೆ ಕಳುಹಿಸುವಂತೆ ಸಲಹೆ ನೀಡಿದರು.

ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಇಕ್ಬಾಲ್ ಅಹಮದ್ ಮಾತನಾಡಿ,ದೇಶದ ಸ್ವಾತಂತ್ರ, ಅಭಿವೃದ್ದಿಗೆ ತಮ್ಮ ತನು, ಮನ, ಧನ ಹಾಗೂ ಪ್ರಾಣವನ್ನು ಅರ್ಪಣೆ ಮಾಡಿದ ಕುಟುಂಬವೆಂದರೆ ಅದು ನೆಹರು ಮನೆತನ.ಅವರ ದೇಶ ಪ್ರೇಮವನ್ನು ಯಾರು ಅಲ್ಲಗಳೆಯಲು ಸಾಧ್ಯವಿಲ್ಲ. ಐಐಎಸ್ಸಿ, ಬಿಹೆಚ್‌ಇಎಲ್ ಸೇರಿದಂತೆ ನವರತ್ನ ಕಂಪನಿಗಳನ್ನು ಹುಟ್ಟು ಹಾಕಿ ದೇಶವನ್ನು ಅಭಿವೃದ್ಧಿ ಪಥದತ್ತ ಕೊಂಡೊಯ್ಯದ ನೆಹರು ಅವರ ನಡೆ ವಿಶ್ವಕ್ಕೆ ಮಾದರಿ. ಇಂದು ಎಸ್.ಐ.ಆರ್. ಎಂಬ ಭೂತ ನಮ್ಮೆಲ್ಲರನ್ನು ಕಾಡುತ್ತಿದೆ.ಪ್ರತಿ ಬೂತ್‌ನಲ್ಲಿಯೂ ನಾವು ಎಚ್ಚೆತ್ತಕೊಂಡು ಪ್ರತಿ ಮತದಾರರ ಹಕ್ಕನ್ನು ರಕ್ಷಿಸುವ ಕೆಲಸ ಆಗಬೇಕು. ಈಗಾಗಲೇ ಡಿಸಿಎಂ. ಸಿ.ಎಂ ನೇತೃತ್ವದಲ್ಲಿ ಸಭೆ ನಡೆದು ಕಟ್ಟುನಿಟ್ಟಿನ ಎಚ್ಚರಿಕೆ ನೀಡಿದ್ದು, ನಾವೆಲ್ಲರೂ ಸೈನಿಕರ ರೀತಿ ಕೆಲಸ ಮಾಡುವ ಮೂಲಕ ತಮ್ಮ ಹಕ್ಕಿನ ಜೊತೆಗೆ, ಇತರೆ ಮತದಾರರ ಹಕ್ಕನ್ನು ಕಾಪಾಡಬೇಕಿದೆ. ಶೀಘ್ರದಲ್ಲಿಯೇ ತುಮಕೂರಿನಲ್ಲಿ ಎಸ್.ಐ.ಆರ್.ಕುರಿತು ಕಾರ್ಯಾಗಾರ ನಡೆಯಲಿದ್ದು, ಎಲ್ಲಾ ಕಾರ್ಯಕರ್ತರು, ಮುಂಚೂಣಿ ಘಟಕಗಳ ಮುಖಂಡರು ಪಾಲ್ಗೊಳ್ಳುವಂತೆ ಮನವಿ ಮಾಡಿದರು.

ಎಸ್ಟಿ ಘಟಕದ ಉಪಾಧ್ಯಕ್ಷರಾದ ಹೆಚ್.ಸಿ.ಹನುಮಂತಯ್ಯ ಮಾತನಾಡಿ,ಸ್ವಾತಂತ್ರ ಹೋರಾಟಕ್ಕೆ ಮುನ್ನುಡಿ ಬರೆದಿದ್ದು ನಾ.ಸು. ಹರ್ಡೀಕರ್ ನೇತೃತ್ವದ ಭಾರತ ಸೇವಾದಳ.ನಂತರದಲ್ಲಿ ಇಡೀ ದೇಶವೇ ಕಾಂಗ್ರೆಸ್ ನೇತೃತ್ವದಲ್ಲಿ ಬೀದಿಗೆ ಇಳಿದು ದೇಶವನ್ನು ಬ್ರಿಟಿಷರ ಕಪಿಮುಷ್ಠಿಯಿಂದ ಬಿಡಿಸಿ,ಅದರ ಮಂಚೂಣಿ ನಾಯಕರಾಗಿದ್ದ ನೆಹರು ಪ್ರಧಾನಿಯಾದರು.ನೆಹರು ಅವರ ಅವಹೇಳವನ್ನು ಸಹಿಸಲು ಸಾಧ್ಯವಿಲ್ಲ. ಬಿಜೆಪಿಯ ಟೀಕೆಗಳಿಗೆ ತಿರುಗೇಟು ನೀಡುವ ಕೆಲಸ ವನ್ನು ಕಾರ್ಯಕರ್ತರು ಮಾಡಬೇಕೆಂದರು.

ಮುಖಂಡರಾದ ಷಣ್ಮುಖಪ್ಪ ಮಾತನಾಡಿ,ನೆಹರು ಆಧುನಿಕ ಭಾರತದ ಶಿಲ್ಪಿ.ತಮ್ಮ ಬುದ್ದಿಶಕ್ತಿ ಮತ್ತು ಅಪಾರ ಪರಿಶ್ರಮದಿಂದ ಭಾರತವನ್ನು ಶೂನ್ಯದಿಂದ ಸ್ವಾವಲಂಬನೆಯವರೆಗೆ ಮುನ್ನಡೆಸಿದರು.ನೆಹರು ಆಡಳಿತದ 16 ವರ್ಷ ಭಾರತದ ರಾಜಕೀಯ ಇತಿಹಾಸದಲ್ಲಿಯೇ ಪರ್ವ ಕಾಲ.ಅವರು ರೂಪಿಸಿದ ಅಲಿಪ್ತ ನೀತಿಗಳು ಇಡೀ ವಿಶ್ವಕ್ಕೆ ಮಾದರಿ ಎಂದರು.

ಮಹಿಳಾ ಮುಖಂಡರಾದ ಭಾಗ್ಯಮ್ಮ ಮಾತನಾಡಿ,ವಿದೇಶದಲ್ಲಿ ಕಾನೂನು ಪದವಿ ಓದಿ, ಮಹಾತ್ಮಗಾಂಧಿ ಅವರ ಕರೆಗೆ ಓಗೊಟ್ಟು ಸ್ವಾತಂತ್ರ ಚಳವಳಿಗೆ ಧುಮಕಿ,9 ವರ್ಷಗಳಿಗೂ ಹೆಚ್ಚು ಕಾಲ ಜೈಲು ವಾಸ ಅನುಭವಿಸಿದರು.ಉಪ್ಪಿನ ಸತ್ಯಾಗ್ರಹ, ಕ್ವಿಟ್ ಇಂಡಿಯಾ ಚಳವಳಿಗಳು ಬ್ರಿಟಿಷರ ಪಾಲಿಗೆ ಸಿಂಹಸ್ವಪ್ನವಾಗಿದ್ದವು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಜಿ.ಚಂದ್ರಶೇಖರ್‌ಗೌಡ ಮಾತನಾಡಿ,ಭಾರತ ಪ್ರಗತಿಶೀಲ ರಾಷ್ಟ್ರವಾಗಲು ನೆಹರು ಹಾಕಿಕೊಟ್ಟ ಬುನಾಧಿಯೇ ಕಾರಣ.ತಮ್ಮ ಶಕ್ತಿ, ಸಾಮರ್ಥ್ಯವನ್ನು ದೇಶಕ್ಕಾಗಿ ಧಾರೆ ಎರೆದವರು. ಇಂದು ಎಸ್.ಐ.ಆರ್.ಮೂಲಕ ಇಡೀ ದೇಶಕ್ಕೆ ನುಸುಳುಕೋರರ ನೆಪದಲ್ಲಿ ಅಲ್ಪಸಂಖ್ಯಾತರು, ದಲಿತರು, ಹಿಂದುಳಿದ ವರ್ಗಗಳ ಮತಗಳನ್ನು ಕಸಿಯಲಾಗುತ್ತಿದೆ.ಕಾಂಗ್ರೆಸ್‌ನ 70 ವರ್ಷಗಳ ಆಡಳಿತದಲ್ಲಿ ಯಾರ ಹಕ್ಕನ್ನು ಕಸಿಯಲಿಲ್ಲ.ಆದರೆ ಅಧಿಕಾರದ ಆಸೆಗೆ ಜನರ ಹಕ್ಕು ಕಸಿಯಲು ಬಿಜೆಪಿ ಮುಂದಾಗಿದೆ. ಇದರ ಬಗ್ಗೆ ಎಚ್ಚೆತ್ತುಕೊಳ್ಳುವಂತೆ ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಅಲ್ಪಸಂಖ್ಯಾತರ ಘಟಕದ ಇರ್ಫಾನ್ ಅಹಮದ್,ಎಸ್.ಟಿ.ಘಟಕದ ಕುಮಾರಸ್ವಾಮಿ, ಎಸ್ಸಿ ಘಟಕದ ಶಿವರಾಜು, ಉಮಾಶಂಕರ್, ಪಿ.ಶಿವಾಜಿ, ಮಂಜುನಾಥ್, ಸಂಜೀವಕುಮಾರ್, ಅಂಬರೀಷ್,ಕೆಡಿಸಿಸಿ ಉಪಾಧ್ಯಕ್ಷ ಶ್ರೀನಿವಾಸಮೂರ್ತಿ, ಕೆಂಪಣ್ಣ, ಶಿವಪ್ರಸಾದ್,ಸೇವಾದಳದ ಭೈಲಪ್ಪ,ಪ್ರಧಾನ ಕಾರ್ಯದರ್ಶಿ ಸುಜಾತ, ಲಕ್ಷ್ಮಿ ದೇವಮ್ಮ ಸೇರಿದಂತೆ ಹಲವರು ಉಪಸ್ಥಿತರಿದ್ದರು.

